*ಯೋಹಾನನು 1:29, 10-13 (IRV)*

# ಲೋಕದ ಪಾಪವನ್ನು ನಿವಾರಣೆ ಮಾಡಲು ದೇವರು ನೇಮಿಸಿದ ಯಜ್ಞದಕುರಿಮರಿ… ಆತನ ಹೆಸರಿನಲ್ಲಿ ನಂಬಿಕೆಯಿಟ್ಟರೋ

ಮರುದಿನ ಯೋಹಾನನು ತನ್ನ ಕಡೆಗೆ ಬರುತ್ತಿದ್ದ ಯೇಸುವನ್ನು ನೋಡಿ, “ಅಗೋ, ಲೋಕದ ಪಾಪವನ್ನು ನಿವಾರಣೆ ಮಾಡಲು ದೇವರು ನೇಮಿಸಿದ ಯಜ್ಞದಕುರಿಮರಿ. … ಆತನು ಲೋಕದಲ್ಲಿ ಇದ್ದನು ಮತ್ತು ಲೋಕವು ಆತನ ಮೂಲಕ ಉಂಟಾಯಿತು, ಆದರೂ ಲೋಕವು ಆತನನ್ನು ಅರಿತುಕೊಳ್ಳಲಿಲ್ಲ. ಆತನು ತನ್ನ ಸ್ವಂತ ಜನರ ಬಳಿಗೆ ಬಂದನು; ಆದರೆ ಸ್ವಂತ ಜನರು ಆತನನ್ನು ಸ್ವೀಕರಿಸಲಿಲ್ಲ. ಆದರೂ ಯಾರಾರು ಆತನನ್ನು ಸ್ವೀಕರಿಸಿದರೋ, ಅಂದರೆ ಆತನ ಹೆಸರಿನಲ್ಲಿ ನಂಬಿಕೆಯಿಟ್ಟರೋ ಅವರಿಗೆ ದೇವರ ಮಕ್ಕಳಾಗುವ ಅಧಿಕಾರವನ್ನು ಆತನು ಕೊಟ್ಟನು. ಇವರು ರಕ್ತಸಂಬಂಧದಿಂದಾಗಲಿ, ಶರೀರದ ಇಚ್ಛೆಯಿಂದಾಗಲಿ, ಪುರುಷ ಸಂಕಲ್ಪದಿಂದಾಗಲಿ ಹುಟ್ಟಿದವರಲ್ಲ; ದೇವರಿಂದಲೇ ಹುಟ್ಟಿದವರು.

**Spiritual Warfare Cards.com**

*Indian Revised Version · CC BY-SA 4.0 · Bridge Connectivity Solutions*

ಯೋಹಾನನು *3:3, 14-17 (IRV)*

# ದೇವರು ಲೋಕದ ಮೇಲೆ ಎಷ್ಟೋ ಪ್ರೀತಿಯನ್ನಿಟ್ಟು ತನ್ನ ಒಬ್ಬನೇ ಮಗನನ್ನು ಕೊಟ್ಟನು... ದೇವರು ತನ್ನ ಮಗನ ಮುಖಾಂತರ ಲೋಕಕ್ಕೆ ರಕ್ಷಣೆಯಾಗಬೇಕೆಂದು

---

ಯೇಸು ಅವನಿಗೆ, "ನಾನು ನಿಜನಿಜವಾಗಿ ಹೇಳುತ್ತೇನೆ, ಒಬ್ಬನು ಹೊಸದಾಗಿ ಹುಟ್ಟದಿದ್ದರೆ ಅವನು ದೇವರ ರಾಜ್ಯವನ್ನು ಕಾಣಲಾರನು," ಎಂದು ಉತ್ತರ ಕೊಟ್ಟನು. ... ಇದಲ್ಲದೆ ಮೋಶೆಯು ಅಡವಿಯಲ್ಲಿ ಕಂಚಿನ ಸರ್ಪವನ್ನು ಮೇಲೆ ಎತ್ತಿ ನಿಲ್ಲಿಸಿದ ಹಾಗೆಯೇ ಮನುಷ್ಯಕುಮಾರನು ಸಹ ಮೇಲಕ್ಕೆ ಎತ್ತಲ್ಪಡಬೇಕು. ಹೀಗೆ ಆತನನ್ನು ನಂಬುವವರೆಲ್ಲರೂ ನಿತ್ಯಜೀವವನ್ನು ಹೊಂದುವರು. "ದೇವರು ಲೋಕದ ಮೇಲೆ ಎಷ್ಟೋ ಪ್ರೀತಿಯನ್ನಿಟ್ಟು ತನ್ನ ಒಬ್ಬನೇ ಮಗನನ್ನು ಕೊಟ್ಟನು ಆತನನ್ನು ನಂಬುವ ಒಬ್ಬನಾದರೂ ನಾಶವಾಗದೆ ಎಲ್ಲರೂ ನಿತ್ಯಜೀವವನ್ನು ಪಡೆಯಬೇಕೆಂದು ಆತನನ್ನು ಕೊಟ್ಟನು. ದೇವರು ತನ್ನ ಮಗನ ಮುಖಾಂತರ ಲೋಕಕ್ಕೆ ರಕ್ಷಣೆಯಾಗಬೇಕೆಂದು ಆತನನ್ನು ಕಳುಹಿಸಿಕೊಟ್ಟನೇ ಹೊರತು ಅಪರಾಧಿಯೆಂದು ಖಂಡಿಸಲಿಕ್ಕೆ ಕಳುಹಿಸಲಿಲ್ಲ.

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ಯೋಹಾನನು *7:24, 37-39, 43 (IRV)*

# ನನ್ನಲ್ಲಿ ಯಾವನು ನಂಬಿಕೆಯಿಡುವನೋ… ಅವನೊಳಗಿನಿಂದ ಜೀವಕರವಾದ ನೀರಿನ ಬುಗ್ಗೆಗಳು ಹರಿಯುವವು

---

ತೋರಿಕೆಗೆ ಅನುಸಾರವಾಗಿ ತೀರ್ಪುಮಾಡಬೇಡಿರಿ. ನ್ಯಾಯಬದ್ಧವಾಗಿ ತೀರ್ಪನ್ನು ಮಾಡಿರಿ” ಎಂದನು. … ಜಾತ್ರೆಯ ಮಹಾದಿನವಾದ ಕಡೆಯ ದಿನದಲ್ಲಿ ಯೇಸು ನಿಂತುಕೊಂಡು “ಯಾವನಿಗಾದರೂ ನೀರಡಿಕೆಯಾಗಿದ್ದರೆ ಅವನು ನನ್ನ ಬಳಿಗೆ ಬಂದು ಕುಡಿಯಲಿ. ಶಾಸ್ತ್ರದಲ್ಲಿ ಹೇಳಿರುವ ಪ್ರಕಾರ ನನ್ನಲ್ಲಿ ಯಾವನು ನಂಬಿಕೆಯಿಡುವನೋ ಅವನೊಳಗಿನಿಂದ ಜೀವಕರವಾದ ನೀರಿನ ಬುಗ್ಗೆಗಳು ಹರಿಯುವವು” ಎಂದು ಕೂಗಿ ಹೇಳಿದನು. ಆದರೆ ಯೇಸು ತನ್ನನ್ನು ನಂಬುವವರು ಹೊಂದಲಿರುವ ಪವಿತ್ರಾತ್ಮವರವನ್ನು ಕುರಿತು ಹೀಗೆ ಹೇಳಿದನು. … ಹೀಗೆ ಆತನ ನಿಮಿತ್ತವಾಗಿ ಜನರಲ್ಲಿ ಭೇದ ಉಂಟಾಯಿತು.

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ಯೋಹಾನನು *6:33, 35, 37, 63 (IRV)*

# ಜೀವ ಕೊಡುವುದು ಆತ್ಮವೇ. ದೇಹವು ಯಾವುದಕ್ಕೂ ಪ್ರಯೋಜನವಾಗುವುದಿಲ್ಲ... ಆತ್ಮವಾಗಿಯೂ, ಜೀವವಾಗಿಯೂ ಇವೆ

ದೇವರು ಕೊಡುವ ಆ ರೊಟ್ಟಿ ಯಾವುದೆಂದರೆ, ಪರಲೋಕದಿಂದ ಇಳಿದು ಬಂದು ಲೋಕಕ್ಕೆ ಜೀವವನ್ನು ಉಂಟುಮಾಡುವಂಥದ್ದೇ” ಎಂದು ಹೇಳಿದನು. … ಯೇಸು ಅವರಿಗೆ “ನಾನೇ ಜೀವದ ರೊಟ್ಟಿ ನನ್ನ ಬಳಿಗೆ ಬರುವವನಿಗೆ ಎಂದಿಗೂ ಹಸಿವೆಯಾಗುವುದಿಲ್ಲ; ನನ್ನನ್ನು ನಂಬುವವನಿಗೆ ಎಂದಿಗೂ ಬಾಯಾರಿಕೆಯಾಗುವುದಿಲ್ಲ. … ತಂದೆಯು ನನಗೆ ಕೊಡುವಂಥವರೆಲ್ಲರೂ ನನ್ನ ಬಳಿಗೆ ಬರುವರು. ನನ್ನ ಬಳಿಗೆ ಬರುವವನನ್ನು ನಾನು ಎಂದಿಗೂ ತಳ್ಳಿಬಿಡುವುದೇ ಇಲ್ಲ. … ಜೀವ ಕೊಡುವುದು ಆತ್ಮವೇ. ದೇಹವು ಯಾವುದಕ್ಕೂ ಪ್ರಯೋಜನವಾಗುವುದಿಲ್ಲ. ನಾನು ನಿಮಗೆ ಹೇಳಿರುವ ಮಾತುಗಳೇ ಆತ್ಮವಾಗಿಯೂ, ಜೀವವಾಗಿಯೂ ಇವೆ.

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ಯೋಹಾನನು *11:35-36, 38*; ಮಾರ್ಕನು *14:33-36 (IRV)*

# ಈತನು ಅವನ ಮೇಲೆ ಎಷ್ಟೋ ಮಮತೆ ಇಟ್ಟಿದ್ದಾನೆ... ಇದು ನನ್ನ ಚಿತ್ತದಂತಲ್ಲ ನಿನ್ನ ಚಿತ್ತದಂತೆಯೇ ಆಗಲಿ

---

ಯೇಸು ಕಣ್ಣೀರಿಟ್ಟನು. ಅದಕ್ಕೆ ಯೆಹೂದ್ಯರು, “ಆಹಾ! ಈತನು ಅವನ ಮೇಲೆ ಎಷ್ಟೋ ಮಮತೆ ಇಟ್ಟಿದ್ದಾನೆ” ಎಂದರು. … ಯೇಸು ತಿರುಗಿ ತನ್ನ ಮನದಲ್ಲಿ ನೊಂದುಕೊಳ್ಳುತ್ತಾ ಸಮಾಧಿಯ ಬಳಿಗೆ ಬಂದನು. … ಪೇತ್ರ, ಯಾಕೋಬ, ಯೋಹಾನರನ್ನು ತನ್ನ ಜೊತೆಯಲ್ಲಿ ಕರೆದುಕೊಂಡು ಹೋಗಿ ಬಹು ಬೆಚ್ಚಿಬೆರಗಾಗಿ ಮನಗುಂದಿದವನಾದನು. ಮತ್ತು ಆತನು ಅವರಿಗೆ “ನನ್ನ ಪ್ರಾಣವು ಸಾಯುವಷ್ಟು ದುಃಖಕ್ಕೆ ಒಳಗಾಗಿದೆ ನೀವು ಇಲ್ಲೇ ಕಾದುಕೊಂಡಿದ್ದು ಎಚ್ಚರವಾಗಿರಿ” ಎಂದು ಹೇಳಿದನು. ಆತನು ಸ್ವಲ್ಪ ಮುಂದೆ ಹೋಗಿ ನೆಲದ ಮೇಲೆ ಬಿದ್ದು ಸಾಧ್ಯವಾದರೆ ಆ ಗಳಿಗೆಯು ತನ್ನಿಂದ ದಾಟಿಹೋಗುವಂತೆ ಪ್ರಾರ್ಥಿಸಿದನು. “ಅಪ್ಪಾ ತಂದೆಯೇ, ನಿನಗೆ ಎಲ್ಲವೂ ಸಾಧ್ಯ, ಈ ಪಾನಪಾತ್ರೆಯನ್ನು ನನ್ನಿಂದ ತೆಗೆದುಬಿಡು ಆದರೂ ಇದು ನನ್ನ ಚಿತ್ತದಂತಲ್ಲ ನಿನ್ನ ಚಿತ್ತದಂತೆಯೇ ಆಗಲಿ” ಎಂದನು.

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ಯೋಹಾನನು *13:14-17, 20 (IRV)*

# ನಾನು ನಿಮಗೆ ಮಾಡಿದಂತೆಯೇ ನೀವು ಸಹ ಮಾಡಬೇಕೆಂದು… ತನ್ನ ದಣಿಗಿಂತ ಆಳು ದೊಡ್ಡವನಲ್ಲ

ಹಾಗಾದರೆ ಕರ್ತನೂ, ಗುರುವೂ ಆಗಿರುವ ನಾನೇ ನಿಮ್ಮ ಪಾದಗಳನ್ನು ತೊಳೆದಿರುವಾಗ, ನೀವು ಸಹ ಒಬ್ಬರ ಪಾದಗಳನ್ನೊಬ್ಬರು ತೊಳೆಯಬೇಕು. ನಾನು ನಿಮಗೆ ಮಾಡಿದಂತೆಯೇ ನೀವು ಸಹ ಮಾಡಬೇಕೆಂದು ನಾನು ನಿಮಗೆ ಮಾದರಿಯನ್ನು ತೋರಿಸಿದ್ದೇನೆ. ನಾನು ನಿಮಗೆ ನಿಜನಿಜವಾಗಿ ಹೇಳುತ್ತೇನೆ; ತನ್ನ ದಣಿಗಿಂತ ಆಳು ದೊಡ್ಡವನಲ್ಲ. ಹಾಗೆಯೇ ಕಳುಹಿಸಲ್ಪಟ್ಟವನು ಕಳುಹಿಸಿದವನಿಗಿಂತ ದೊಡ್ಡವನಲ್ಲ. ನೀವು ಇವುಗಳನ್ನು ತಿಳಿದುಕೊಂಡು ಇದರಂತೆ ಮಾಡಿದರೆ ನೀವು ಧನ್ಯರು. … ನಾನು ನಿಮಗೆ ನಿಜನಿಜವಾಗಿ ಹೇಳುತ್ತೇನೆ; ನಾನು ಕಳುಹಿಸಿದಾತನನ್ನು ಸ್ವೀಕರಿಸುವವನು ನನ್ನನ್ನು ಸ್ವೀಕರಿಸುತ್ತಾನೆ; ನನ್ನನ್ನು ಸ್ವೀಕರಿಸುವವನು ನನ್ನನ್ನು ಕಳುಹಿಸಿದಾತನನ್ನೇ ಸ್ವೀಕರಿಸುತ್ತಾನೆ.”

**_Spiritual Warfare Cards.com_**

*Indian Revised Version · CC BY-SA 4.0 · Bridge Connectivity Solutions*

ಯೋಹಾನನು *14:6, 9, 19; 10:9-11 (IRV)*

# ನಾನೇ ಮಾರ್ಗವೂ, ಸತ್ಯವೂ ಮತ್ತು ಜೀವವೂ ಆಗಿದ್ದೇನೆ… ನಾನು ಜೀವಿಸುವುದರಿಂದ ನೀವು ಜೀವಿಸುವಿರಿ

---

ಯೇಸು ಅವನಿಗೆ, “ನಾನೇ ಮಾರ್ಗವೂ, ಸತ್ಯವೂ ಮತ್ತು ಜೀವವೂ ಆಗಿದ್ದೇನೆ. ನನ್ನ ಮೂಲಕವಲ್ಲದೆ ಯಾರೂ ತಂದೆಯ ಬಳಿಗೆ ಬರಲಾರರು. … ಯೇಸು ಅವನಿಗೆ, “ಫಿಲಿಪ್ಪನೇ, ನಾನು ಇಷ್ಟು ಕಾಲ ನಿಮ್ಮ ಜೊತೆಯಲ್ಲಿಯೇ ಇದ್ದರೂ ಇನ್ನೂ ನೀನು ನನ್ನನ್ನು ತಿಳಿಯಲಿಲ್ಲವೇ! ನನ್ನನ್ನು ನೋಡಿದವನು ತಂದೆಯನ್ನು ನೋಡಿದ್ದಾನೆ, ಮತ್ತು ನಮಗೆ ತಂದೆಯನ್ನು ತೋರಿಸು ಎಂದು ನೀನು ಹೇಳುವುದಾದರು ಹೇಗೆ? … ಇನ್ನು ಸ್ವಲ್ಪ ಕಾಲವಾದ ಮೇಲೆ ಲೋಕವು ನನ್ನನ್ನು ನೋಡುವುದಿಲ್ಲ, ಆದರೆ ನೀವು ನನ್ನನ್ನು ನೋಡುವಿರಿ. ನಾನು ಜೀವಿಸುವುದರಿಂದ ನೀವು ಜೀವಿಸುವಿರಿ. … ನಾನೇ ಆ ಬಾಗಿಲು. ನನ್ನ ಮುಖಾಂತರವಾಗಿ ಯಾವನಾದರೂ ಒಳಗೆ ಪ್ರವೇಶಿಸಿದರೆ ಅವನು ಸುರಕ್ಷಿತನಾಗಿದ್ದು ಒಳಗೆ ಹೋಗುವವನು, ಹೊರಗೆ ಬರುವವನು ಮತ್ತು ಮೇವನ್ನು ಕಂಡುಕೊಳ್ಳುವವನು. ಕಳ್ಳನಾದರೋ ಕದ್ದುಕೊಳ್ಳುವುದಕ್ಕೂ, ಕೊಯ್ಯುವುದಕ್ಕೂ ಮತ್ತು ನಾಶಮಾಡುವುದಕ್ಕೂ ಬರುತ್ತಾನೆಯೇ ಹೊರತು ಮತ್ತಾವುದಕ್ಕೂ ಬರುವುದಿಲ್ಲ. ನಾನಾದರೋ ಅವುಗಳಿಗೆ ಜೀವವು ಇರಬೇಕೆಂತಲೂ ಅದು ಸಮೃದ್ಧಿಯಾಗಿರಬೇಕೆಂತಲೂ ಬಂದೆನು. “ನಾನೇ ಒಳ್ಳೆಯ ಕುರುಬನು. ಒಳ್ಳೆಯ ಕುರುಬನು ತನ್ನ ಕುರಿಗಳಿಗೋಸ್ಕರ ತನ್ನ ಪ್ರಾಣವನ್ನು ಕೊಡುತ್ತಾನೆ.



*Indian Revised Version · CC BY-SA 4.0 · Bridge Connectivity Solutions*

ಯೋಹಾನನು *15:1-2, 4-5 (IRV)*

# ನೀವು ನನ್ನಲ್ಲಿ ನೆಲೆಗೊಂಡಿರಿ... ಕೊಂಬೆಯು ಬಳ್ಳಿಯಲ್ಲಿ ನೆಲೆಗೊಂಡಿರದಿದ್ದರೆ ಹೇಗೆ ತನ್ನಷ್ಟಕ್ಕೇ ತಾನೇ ಫಲಕೊಡಲಾರದೋ

---

“ನಾನೇ ನಿಜವಾದ ದ್ರಾಕ್ಷಿಬಳ್ಳಿ, ನನ್ನ ತಂದೆ ತೋಟಗಾರನು. ನನ್ನಲ್ಲಿದ್ದು ಫಲಕೊಡದಿರುವ ಪ್ರತಿಯೊಂದು ಕೊಂಬೆಯನ್ನು ಆತನು ಕತ್ತರಿಸಿಹಾಕುತ್ತಾನೆ. ಫಲ ಕೊಡುವ ಪ್ರತಿಯೊಂದು ಕೊಂಬೆಯು ಹೆಚ್ಚು ಫಲ ಕೊಡುವ ಹಾಗೆ ಅದನ್ನು ಕತ್ತರಿಸಿ ಶುದ್ಧಮಾಡುತ್ತಾನೆ. … ನೀವು ನನ್ನಲ್ಲಿ ನೆಲೆಗೊಂಡಿರಿ, ನಾನೂ ನಿಮ್ಮಲ್ಲಿ ನೆಲೆಗೊಂಡಿರುವೆನು. ಕೊಂಬೆಯು ಬಳ್ಳಿಯಲ್ಲಿ ನೆಲೆಗೊಂಡಿರದಿದ್ದರೆ ಹೇಗೆ ತನ್ನಷ್ಟಕ್ಕೇ ತಾನೇ ಫಲಕೊಡಲಾರದೋ, ಹಾಗೆಯೇ ನೀವು ನನ್ನಲ್ಲಿ ನೆಲೆಗೊಂಡಿರದಿದ್ದರೆ ಫಲಕೊಡಲಾರಿರಿ. ನಾನು ದ್ರಾಕ್ಷಿಬಳ್ಳಿ, ನೀವು ಕೊಂಬೆಗಳು; ಒಬ್ಬನು ನನ್ನಲ್ಲಿಯೂ ನಾನು ಅವನಲ್ಲಿಯೂ ನೆಲೆಗೊಂಡಿದ್ದರೆ ಅವನು ಬಹಳ ಫಲ ಕೊಡುವನು. ನೀವು ನನ್ನನ್ನು ಬಿಟ್ಟು ಏನೂ ಮಾಡಲಾರಿರಿ.

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ಯೋಹಾನನು *17:3-6 (IRV)*

# ಒಬ್ಬನೇ ಸತ್ಯದೇವರಾಗಿರುವ ನಿನ್ನನ್ನೂ... ನೀನು ಕಳುಹಿಸಿಕೊಟ್ಟ ಯೇಸು ಕ್ರಿಸ್ತನನ್ನೂ ತಿಳಿಯುವುದೇ ನಿತ್ಯಜೀವವು

ಒಬ್ಬನೇ ಸತ್ಯದೇವರಾಗಿರುವ ನಿನ್ನನ್ನೂ ಮತ್ತು ನೀನು ಕಳುಹಿಸಿಕೊಟ್ಟ ಯೇಸು ಕ್ರಿಸ್ತನನ್ನೂ ತಿಳಿಯುವುದೇ ನಿತ್ಯಜೀವವು. ನೀನು ನನಗೆ ಕೊಟ್ಟ ಕೆಲಸವನ್ನು ನಾನು ನೆರವೇರಿಸಿ ಭೂಲೋಕದಲ್ಲಿ ನಾನು ನಿನ್ನನ್ನು ಮಹಿಮೆಪಡಿಸಿದ್ದೇನೆ. ಈಗ ತಂದೆಯೇ, ಲೋಕವು ಸೃಷ್ಟಿಯಾಗುವುದಕ್ಕಿಂತ ಮೊದಲು, ನಿನ್ನ ಬಳಿಯಲ್ಲಿ ನನಗಿದ್ದ ಮಹಿಮೆಯಂತೆಯೇ ನಿನ್ನೊಂದಿಗೆ ನನ್ನನ್ನು ಮಹಿಮೆಪಡಿಸು. “ಲೋಕದಲ್ಲಿ ನೀನು ನನಗೆ ಕೊಟ್ಟಿರುವ ಮನುಷ್ಯರಿಗೆ ನಾನು ನಿನ್ನ ಹೆಸರನ್ನು ಪ್ರಕಟಪಡಿಸಿದ್ದೇನೆ. ಇವರು ನಿನ್ನವರಾಗಿದ್ದರು ಮತ್ತು ನೀನು ಇವರನ್ನು ನನಗೆ ಕೊಟ್ಟಿದ್ದೀ. ಇವರು ನಿನ್ನ ವಾಕ್ಯಕ್ಕೆ ವಿಧೇಯರಾಗಿದ್ದಾರೆ.



*Indian Revised Version · CC BY-SA 4.0 · Bridge Connectivity Solutions*

ಮಾರ್ಕನು *4:14-20 (IRV)*

# ಐಶ್ವರ್ಯದಿಂದುಂಟಾಗುವ ವ್ಯಾಮೋಹವೂ, ಇತರ ವಿಷಯಗಳ ಮೇಲಣ ಆಸೆಗಳೂ... ಆ ವಾಕ್ಯವನ್ನು ಅಡಗಿಸಿಬಿಡುವುದರಿಂದ

ಆ ಬಿತ್ತುವವನು ವಾಕ್ಯವೆಂಬ ಬೀಜವನ್ನು ಬಿತ್ತುತ್ತಾನೆ. ಕೆಲವರು ವಾಕ್ಯವನ್ನು ಕೇಳಿದ ಕೂಡಲೇ ಸೈತಾನನು ಬಂದು ಅವರಲ್ಲಿ ಬಿತ್ತಿದ್ದ ವಾಕ್ಯವನ್ನು ತೆಗೆದುಬಿಡುತ್ತಾನೆ. ಇವರೇ ದಾರಿಯ ಮಗ್ಗುಲಲ್ಲಿ ಬಿತ್ತಲ್ಪಟ್ಟ ಬೀಜವಾಗಿರುವವರು. “ಅದೇ ಪ್ರಕಾರ ಬೇರೆ ಕೆಲವರು ವಾಕ್ಯವನ್ನು ಕೇಳಿದ ಕೂಡಲೆ ಸಂತೋಷದಿಂದ ಅದನ್ನು ಸ್ವೀಕರಿಸುತ್ತಾರೆ; ಆದರೆ ಅವರಿಗೆ ಬೇರಿಲ್ಲದ ಕಾರಣ ಇವರು ಸ್ವಲ್ಪ ಕಾಲ ಮಾತ್ರವೇ ಇದ್ದು, ಬಳಿಕ ಆ ವಾಕ್ಯದ ನಿಮಿತ್ತವಾಗಿ ಸಂಕಟವಾಗಲಿ ಹಿಂಸೆಯಾಗಲಿ ಬಂದರೆ ಬೇಗ ಎಡವಿಬೀಳುತ್ತಾರೆ; ಇವರೇ ಬಂಡೆಯ ನೆಲದಲ್ಲಿ ಬಿತ್ತಲ್ಪಟ್ಟ ಬೀಜವಾಗಿರುವವರು. “ಇನ್ನು ಕೆಲವರು ಮುಳ್ಳುಗಿಡಗಳಲ್ಲಿ ಬಿದ್ದ ಬೀಜವಾಗಿರುವವರು; ಇವರು ವಾಕ್ಯವನ್ನು ಕೇಳಿದಾಗ್ಯೂ ಪ್ರಪಂಚದ ಚಿಂತೆಗಳೂ, ಐಶ್ವರ್ಯದಿಂದುಂಟಾಗುವ ವ್ಯಾಮೋಹವೂ, ಇತರ ವಿಷಯಗಳ ಮೇಲಣ ಆಸೆಗಳೂ ಸೇರಿ ಆ ವಾಕ್ಯವನ್ನು ಅಡಗಿಸಿಬಿಡುವುದರಿಂದ ನಿಷ್ಫಲರಾಗಿರುತ್ತಾರೆ. ಮತ್ತೆ ಕೆಲವರು ವಾಕ್ಯವನ್ನು ಕೇಳಿ ಕೈಕೊಂಡು ಮೂವತ್ತರಷ್ಟಾಗಲಿ ಅರವತ್ತರಷ್ಟಾಗಲಿ ನೂರರಷ್ಟಾಗಲಿ ಫಲವನ್ನು ಕೊಡುತ್ತಾರೆ; ಇವರೇ ಒಳ್ಳೆಯ ನೆಲದಲ್ಲಿ ಬಿದ್ದ ಬೀಜವಾಗಿರುವವರು” ಅಂದನು.

**Spiritual Warfare Cards.com**

*Indian Revised Version · CC BY-SA 4.0 · Bridge Connectivity Solutions*

ಮಾರ್ಕನು *11:22-25 (IRV)*

# ನಿಮಗೆ ದೇವರಲ್ಲಿ ನಂಬಿಕೆಯಿರಲಿ… ಯಾರ ಮೇಲೆ ಏನಾದರೂ ವಿರೋಧವಿದ್ದರೆ ಅದನ್ನು ಕ್ಷಮಿಸಿರಿ

ಯೇಸು ಹೇಳಿದ್ದೇನಂದರೆ, “ನಿಮಗೆ ದೇವರಲ್ಲಿ ನಂಬಿಕೆಯಿರಲಿ. ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ, ಯಾರಾದರೂ ಈ ಬೆಟ್ಟಕ್ಕೆ, ‘ನೀನು ಕಿತ್ತುಕೊಂಡು ಹೋಗಿ ಸಮುದ್ರದಲ್ಲಿ ಬೀಳು!’ ಎಂದು ಹೇಳಿ ತನ್ನ ಮನಸ್ಸಿನಲ್ಲಿ ಸಂಶಯಪಡದೆ ತಾನು ಹೇಳಿದ್ದು ಆಗುವುದೆಂದು ನಂಬಿದರೆ ಅವನು ಹೇಳಿದಂತೆಯೇ ಆಗುವುದು. ಆದಕಾರಣ ನೀವು ಪ್ರಾರ್ಥನೆಮಾಡಿ ಏನೇನು ಬೇಡಿಕೊಳ್ಳುತ್ತೀರೋ ಅದನ್ನೆಲ್ಲಾ ಹೊಂದಿದ್ದೇವೆಂದು ನಂಬಿರಿ; ಅದು ನಿಮಗೆ ಸಿಕ್ಕುವುದೆಂದು ನಿಮಗೆ ಹೇಳುತ್ತೇನೆ. ಇದಲ್ಲದೆ ನೀವು ನಿಂತುಕೊಂಡು ಪ್ರಾರ್ಥಿಸುವಾಗ ಯಾರ ಮೇಲೆ ಏನಾದರೂ ವಿರೋಧವಿದ್ದರೆ ಅದನ್ನು ಕ್ಷಮಿಸಿರಿ; ಆಗ ಪರಲೋಕದಲ್ಲಿರುವ ನಿಮ್ಮ ತಂದೆಯು ಸಹ ನಿಮ್ಮ ತಪ್ಪುಗಳನ್ನು ಕ್ಷಮಿಸುವನು” ಅಂದನು.



*Indian Revised Version · CC BY-SA 4.0 · Bridge Connectivity Solutions*

*1 ಕೊರಿಂಥದವರಿಗೆ 3:10-15 (IRV)*

# ತಾನು ಅದರ ಮೇಲೆ ಹೇಗೆ ಕಟ್ಟುತ್ತಿದ್ದೇನೆಂದು ಪ್ರತಿಯೊಬ್ಬನು ಎಚ್ಚರಿಕೆಯಿಂದಿರಬೇಕು... ಯೇಸು ಕ್ರಿಸ್ತನೆಂಬ ಅಸ್ತಿವಾರವನ್ನಲ್ಲದೆ... ಆ ಬೆಂಕಿ ಶೋಧಿಸುವುದು

ದೇವರು ನನಗೆ ಕೊಟ್ಟ ಕೃಪೆಯ ಪ್ರಕಾರ ನಾನು ಜಾಣ್ಮೆಯುಳ್ಳ ಪ್ರವೀಣನಾದ ಶಿಲ್ಪಿಯಂತೆ ಅಸ್ತಿವಾರ ಹಾಕಿದೆನು. ಮತ್ತೊಬ್ಬನು ಅದರ ಮೇಲೆ ಕಟ್ಟುತ್ತಾನೆ. ಆದರೆ ತಾನು ಅದರ ಮೇಲೆ ಹೇಗೆ ಕಟ್ಟುತ್ತಿದ್ದೇನೆಂದು ಪ್ರತಿಯೊಬ್ಬನು ಎಚ್ಚರಿಕೆಯಿಂದಿರಬೇಕು. ಯೇಸು ಕ್ರಿಸ್ತನೆಂಬ ಅಸ್ತಿವಾರವನ್ನಲ್ಲದೆ ಮತ್ತೊಂದು ಅಸ್ತಿವಾರವನ್ನು ಯಾರೂ ಹಾಕಲಾರರಷ್ಟೆ. ಆ ಅಸ್ತಿವಾರದ ಮೇಲೆ ಚಿನ್ನ, ಬೆಳ್ಳಿ, ರತ್ನಗಳು, ಕಟ್ಟಿಗೆ, ಹುಲ್ಲು, ಆಪು ಮುಂತಾದವುಗಳಲ್ಲಿ ಯಾವುದರಿಂದ ಕಟ್ಟಿದರೂ, ಅವನವನ ಕೆಲಸವು ಪ್ರಕಟವಾಗುವುದು. ಕ್ರಿಸ್ತನು ಬರುವ ದಿನವು ಬೆಂಕಿಯೊಡನೆ ಉದಯವಾಗಿ ಆ ಕೆಲಸವನ್ನು ಸ್ಪಷ್ಟವಾಗಿ ತೋರಿಸುವುದು. ಅವನವನ ಕೆಲಸವೆಂಥದೆಂಬುದನ್ನು ಆ ಬೆಂಕಿ ಶೋಧಿಸುವುದು. ಒಬ್ಬನು ಆ ಅಸ್ತಿವಾರದ ಮೇಲೆ ಕಟ್ಟಿದ್ದು ಉಳಿದರೆ ಅವನಿಗೆ ಪ್ರತಿಫಲ ಸಿಕ್ಕುವುದು. ಒಬ್ಬನು ಕಟ್ಟಿದ್ದು ಸುಟ್ಟು ಹೋದರೆ ಅವನಿಗೆ ನಷ್ಟವಾಗುವುದು. ತಾನಾದರೋ ರಕ್ಷಣೆ ಹೊಂದುವನು. ಆದರೆ ಬೆಂಕಿಯೊಳಗಿಂದ ತಪ್ಪಿಸಿಕೊಂಡವನ ಹಾಗಿರುವನು.

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

1 ಕೊರಿಂಥದವರಿಗೆ *3:5-7, 21-23 (IRV)*

# ಅದನ್ನು ಬೆಳೆಸಿದವನು ದೇವರೇ... ಮನುಷ್ಯಮಾತ್ರದವರ ವಿಷಯದಲ್ಲಿ ಯಾರೂ ಹೊಗಳಿಕೊಳ್ಳದಿರಲಿ... ನೀವಂತೂ ಕ್ರಿಸ್ತನವರು

ಹಾಗಾದರೆ ಅಪೊಲ್ಲೋಸನು ಯಾರು? ಪೌಲನು ಯಾರು? ಅವರ ಸೇವೆಯ ಮುಖಾಂತರ ನೀವು ಕ್ರಿಸ್ತನನ್ನು ನಂಬುವವರಾದಿರಿ ಕರ್ತನು ಪ್ರತಿಯೊಬ್ಬನಿಗೆ ದಯಪಾಲಿಸಿದ ಪ್ರಕಾರ ಅವರು ಸೇವೆಮಾಡುವವರಾಗಿದ್ದಾರೆ. ನಾನು ಸಸಿಯನ್ನು ನೆಟ್ಟೆನು. ಅಪೊಲ್ಲೋಸನು ನೀರನ್ನು ಹೊಯ್ದನು. ಆದರೆ ಅದನ್ನು ಬೆಳೆಸಿದವನು ದೇವರೇ. ಹೀಗಿರಲಾಗಿ ನೆಡುವವನಾಗಲಿ, ನೀರುಹೊಯ್ಯುವವನಾಗಲಿ ಮುಖ್ಯವಾದವನಲ್ಲ, ಬೆಳೆಸುವ ದೇವರೇ ಪ್ರಾಮುಖ್ಯವಾದಾತನು. ... ಆದಕಾರಣ ಮನುಷ್ಯಮಾತ್ರದವರ ವಿಷಯದಲ್ಲಿ ಯಾರೂ ಹೊಗಳಿಕೊಳ್ಳದಿರಲಿ. ಯಾಕೆಂದರೆ ಸಮಸ್ತವೂ ನಿಮಗಾಗಿಯೇ ಇದೆ. ಪೌಲನಾಗಲಿ, ಅಪೊಲ್ಲೋಸನಾಗಲಿ, ಕೇಫನಾಗಲಿ ಲೋಕವಾಗಲಿ, ಜೀವವಾಗಲಿ ಮರಣವಾಗಲಿ ಈಗಿನ ಸಂಗತಿಗಳಾಗಲಿ ಮುಂದಣ ಸಂಗತಿಗಳಾಗಲಿ ಸಮಸ್ತವೂ ನಿಮ್ಮದೇ. ನೀವಂತೂ ಕ್ರಿಸ್ತನವರು, ಕ್ರಿಸ್ತನು ದೇವರಿನವನು.

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

1 ಕೊರಿಂಥದವರಿಗೆ 4:4-7 (IRV)

# ಕರ್ತನು ಬರುವ ಕಾಲಕ್ಕಿಂತ ಮುಂಚೆ... ಹೃದಯದ ಆಲೋಚನೆಗಳನ್ನು ಪ್ರಕಟಪಡಿಸುವನು... ಯಾಕೆ ಕೊಚ್ಚಿಕೊಳ್ಳುತ್ತೀ?

---

ನನ್ನಲ್ಲಿ ದೋಷವಿದೆಯೆಂದು ನನ್ನ ಮನಸ್ಸಿಗೆ ತೋರುವುದಿಲ್ಲವಾದರೂ ನಾನು ನಿರ್ದೋಷಿಯೆಂದು ನಿರ್ಣಯಿಸುವಂತಿಲ್ಲ. ನನ್ನನ್ನು ನ್ಯಾಯವಿಚಾರಣೆ ಮಾಡುವವನು ಕರ್ತನೇ. ಆದ್ದರಿಂದ ಕರ್ತನು ಬರುವ ಕಾಲಕ್ಕಿಂತ ಮುಂಚೆ ಯಾವುದನ್ನು ಕುರಿತು ನ್ಯಾಯತೀರ್ಪುಮಾಡಬೇಡಿರಿ. ಆತನು ಕತ್ತಲೆಯಲ್ಲಿರುವ ಗುಪ್ತಕಾರ್ಯಗಳನ್ನು ಬೆಳಕಿಗೆ ತರುವನು. ಹೃದಯದ ಆಲೋಚನೆಗಳನ್ನು ಪ್ರಕಟಪಡಿಸುವನು. ಆ ಕಾಲದಲ್ಲಿ ಪ್ರತಿಯೊಬ್ಬನಿಗೆ ಬರತಕ್ಕ ಹೊಗಳಿಕೆಯು ದೇವರಿಂದ ದೊರಕುವುದು. ಪ್ರಿಯರೇ, ನಾನು ನಿಮಗೋಸ್ಕರವಾಗಿ ನನ್ನಗೂ ಅಪೊಲ್ಲೋಸನಿಗೂ ಈ ನಿಯಮಗಳನ್ನೆಲ್ಲಾ ಅನ್ವಯಿಸಿಕೊಂಡು ಹೇಳಿದ್ದೇನೆ. ಆದ್ದರಿಂದ ನೀವು “ಧರ್ಮಶಾಸ್ತ್ರದಲ್ಲಿ ಬರೆದಿರುವುದನ್ನು ಮೀರಿಹೋಗಬಾರದು,” ಎಂಬ ಈ ವಾಕ್ಯದ ಅರ್ಥವನ್ನು ನಮ್ಮಿಂದ ಕಲಿತುಕೊಂಡು, ನಿಮ್ಮಲ್ಲಿ ಯಾವನಾದರೂ ಒಬ್ಬನನ್ನು ವಿರೋಧಿಸಿ ಮತ್ತೊಬ್ಬನ ಪಕ್ಷವನ್ನು ಹಿಡಿದು ಉಬ್ಬಿಕೊಳ್ಳಬಾರದು ಎಂಬುದಕ್ಕಾಗಿದೆ. ನಿನ್ನನ್ನು ಇತರರಿಗಿಂತಲೂ ಶ್ರೇಷ್ಠನನ್ನಾಗಿ ಮಾಡಿದವರು ಯಾರು? ದೇವರಿಂದ ಹೊಂದದೆ ಇರುವಂಥದು ನಿನ್ನಲ್ಲಿ ಒಂದಾದರೂ ಉಂಟೋ? ಹೊಂದಿದ ಮೇಲೆ ಹೊಂದಿದ್ದಲ್ಲವೆಂಬಂತೆ ಯಾಕೆ ಕೊಚ್ಚಿಕೊಳ್ಳುತ್ತೀ?



*Indian Revised Version · CC BY-SA 4.0 · Bridge Connectivity Solutions*

*2 ಕೊರಿಂಥದವರಿಗೆ 10:3-5, 17-18 (IRV)*

# ದೇವಜ್ಞಾನಕ್ಕೆ ವಿರೋಧವಾಗಿ ಏಳುವ ಅಹಂಭಾವಗಳನ್ನು ಧ್ವಂಸಮಾಡಿ... ಪ್ರತಿಯೊಂದು ಆಲೋಚನೆಗಳನ್ನೂ ಕ್ರಿಸ್ತನಿಗೆ ವಿಧೇಯರಾಗುವಂತೆ ಸೆರೆಹಿಡಿದು

ನಾವು ಲೋಕದಲ್ಲಿದ್ದರೂ ಲೋಕಾನುಸಾರವಾಗಿ ಯುದ್ಧಮಾಡುವವರಲ್ಲ. ನಾವು ಉಪಯೋಗಿಸುವ ಆಯುಧಗಳು ಲೋಕದ ಆಯುಧಗಳಲ್ಲ. ಅವು ದೇವರ ಎಣಿಕೆಯಲ್ಲಿ ಬಲವಾಗಿದ್ದು ಕೋಟೆಗಳನ್ನು ಕೆಡವಿಹಾಕುವಂಥವುಗಳಾಗಿವೆ. ನಾವು ದೇವಜ್ಞಾನಕ್ಕೆ ವಿರೋಧವಾಗಿ ಏಳುವ ಅಹಂಭಾವಗಳನ್ನು ಧ್ವಂಸಮಾಡಿ, ಪ್ರತಿಯೊಂದು ಆಲೋಚನೆಗಳನ್ನೂ ಕ್ರಿಸ್ತನಿಗೆ ವಿಧೇಯರಾಗುವಂತೆ ಸೆರೆಹಿಡಿದು, … “ಹೆಚ್ಚಳಪಡುವವನು ಕರ್ತನಲ್ಲಿಯೇ ಹೆಚ್ಚಳಪಡಲಿ.” ತನ್ನನ್ನು ತಾನೇ ಹೊಗಳಿಕೊಳ್ಳುವವನು ಯೋಗ್ಯನಲ್ಲ. ಕರ್ತನು ಯಾರನ್ನು ಹೊಗಳುತ್ತಾನೋ ಅವನೇ ಯೋಗ್ಯನು.

**Spiritual Warfare Cards.com**

*Indian Revised Version · CC BY-SA 4.0 · Bridge Connectivity Solutions*

2 ಕೊರಿಂಥದವರಿಗೆ *5:4, 10, 17, 20-21 (IRV)*

# ಯಾವನಾದರೂ ಕ್ರಿಸ್ತನಲ್ಲಿದ್ದರೆ ಅವನು ನೂತನ ಸೃಷ್ಟಿಯಾಗಿದ್ದಾನೆ... ಪೂರ್ವಸ್ಥಿತಿ ಹೋಗಿ ಎಲ್ಲಾ ನೂತನವಾಯಿತು

ಏಕೆಂದರೆ, ಈ ದೇಹವೆಂಬ ಗುಡಾರದಲ್ಲಿರುವವರಾದ ನಾವು ಭಾರಹೊತ್ತುಕೊಂಡವರಾಗಿ ನರಳುತ್ತೇವೆ; ಈ ದೇಹವು ಕಳಚಿಹೋಗಬೇಕೆಂಬುದು ನಮ್ಮ ಬಯಕೆ ಅಲ್ಲ; ಬದಲಾಗಿ ಅದರ ಮೇಲೆ ಧರಿಸಿಕೊಳ್ಳಬೇಕೆಂಬುದೇ. ಆದ್ದರಿಂದ ನಶ್ವರವಾದದ್ದು ಅಳಿದುಹೋಗಿ ಅಮರವಾದದ್ದು ಉಳಿಯುವಂತೆ ಅಪೇಕ್ಷಿಸುತ್ತೇವೆ. … ಯಾಕೆಂದರೆ ಪ್ರತಿಯೊಬ್ಬನು ತನ್ನ ದೇಹದ ಮೂಲಕ ನಡೆಸಿದ ಒಳ್ಳೆಯ ಅಥವಾ ಕೆಟ್ಟ ಕಾರ್ಯಕ್ಕೆ ತಕ್ಕ ಪ್ರತಿಫಲವನ್ನು ಹೊಂದುವುದಕ್ಕೋಸ್ಕರ ಕ್ರಿಸ್ತನ ನ್ಯಾಯಾಸನದ ಮುಂದೆ ಯಥಾಸ್ಥಿತಿಯಲ್ಲಿ ಕಾಣಿಸಿಕೊಳ್ಳಬೇಕಾಗಿದೆ. … ಆದ್ದರಿಂದ ಯಾವನಾದರೂ ಕ್ರಿಸ್ತನಲ್ಲಿದ್ದರೆ ಅವನು ನೂತನ ಸೃಷ್ಟಿಯಾಗಿದ್ದಾನೆ. ಇಗೋ, ಪೂರ್ವಸ್ಥಿತಿ ಹೋಗಿ ಎಲ್ಲಾ ನೂತನವಾಯಿತು. … ಆದ್ದರಿಂದ ನಾವು ಕ್ರಿಸ್ತನ ರಾಯಭಾರಿಗಳು. ದೇವರೇ ನಮ್ಮ ಮುಖಾಂತರ ಕರೆನೀಡುತ್ತಿದ್ದಾನೆ. ದೇವರೊಡನೆ ನೀವು ಸಂಧಾನಮಾಡಿಕೊಳ್ಳಿರೆಂದು ಕ್ರಿಸ್ತನ ಹೆಸರಿನಲ್ಲಿ ನಾವು ನಿಮ್ಮನ್ನು ವಿನಂತಿಸುತೇವೆ. ಪಾಪವನ್ನೇ ಅರಿಯದ ಕ್ರಿಸ್ತ ಯೇಸುವನ್ನು ದೇವರು ನಮಗೋಸ್ಕರ ಪಾಪಸ್ವರೂಪಿಯನ್ನಾಗಿಸಿದರು. ಕ್ರಿಸ್ತ ಯೇಸುವಿನಲ್ಲಿ ನಾವು ನೀತಿವಂತರಾಗಬೇಕೆಂದು ದೇವರು ಹೀಗೆ ಮಾಡಿದರು.

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ಗಲಾತ್ಯದವರಿಗೆ *3:2-3; 5:1, 4, 13-14 (IRV)*

# ಕ್ರಿಸ್ತನು ನಮ್ಮನ್ನು ಸ್ವತಂತ್ರರಾಗಿರಿಸಬೇಕೆಂದೇ ನಮಗೆ ಬಿಡುಗಡೆ ಮಾಡಿದನು… ನಿಮಗಿರುವ ಸ್ವಾತಂತ್ರ್ಯವನ್ನು ಶರೀರಾಧೀನ ಸ್ವಭಾವಕ್ಕೆ ಆಸ್ಪದವಾಗಿ ಬಳಸದೆ

ಒಂದು ಸಂಗತಿಯನ್ನು ಮಾತ್ರ ನಿಮ್ಮಿಂದ ತಿಳಿದುಕೊಳ್ಳಬೇಕೆಂದಿದ್ದೇನೆ. ನೀವು ದೇವರಾತ್ಮನನ್ನು ಹೊಂದಿದ್ದು ಧರ್ಮಶಾಸ್ತ್ರದ ನೇಮನಿಷ್ಠೆಗಳನ್ನು ಅನುಸರಿಸಿದ್ದರಿಂದಲೋ ಅಥವಾ ನಂಬಿಕೆಯ ಸುವಾರ್ತೆಯನ್ನು ಕೇಳಿದ್ದರಿಂದಲೋ? ನೀವು ಇಷ್ಟು ಬುದ್ಧಿಯಿಲ್ಲದವರೋ? ದೇವರಾತ್ಮಾನುಸಾರವಾಗಿ ಪ್ರಾರಂಭಿಸಿ ಈಗ ಶಾರೀರಿಕ ಸಂಬಂಧವಾಗಿ ಕೊನೆಗೊಳಿಸುವಿರೋ? … ಕ್ರಿಸ್ತನು ನಮ್ಮನ್ನು ಸ್ವತಂತ್ರರಾಗಿರಿಸಬೇಕೆಂದೇ ನಮಗೆ ಬಿಡುಗಡೆ ಮಾಡಿದನು. ಆದರಲ್ಲಿ ಸ್ಥಿರವಾಗಿ ನಿಲ್ಲಿರಿ, ದಾಸತ್ವದ ನೊಗದಲ್ಲಿ ತಿರುಗಿ ಸಿಕ್ಕಿಕೊಳ್ಳಬೇಡಿರಿ. … ನಿಮ್ಮಲ್ಲಿ ಯಾರಾರು ಧರ್ಮಶಾಸ್ತ್ರದಿಂದ ನೀತಿವಂತರಾಗಬೇಕೆಂದು ಬಯಸಿದ್ದೀರೋ ಅವರು ಕ್ರಿಸ್ತನಿಂದ ಅಗಲಿಹೋದವರಾಗಿದ್ದೀರಿ. ಕೃಪೆಯಿಂದ ಬಿದ್ದುಹೋದವರಾಗಿದ್ದೀರಿ. … ಸಹೋದರರೇ, ನೀವು ಸ್ವತಂತ್ರರಾಗಿರಬೇಕೆಂದು ದೇವರು ನಿಮ್ಮನ್ನು ಕರೆದನು. ಆದರೆ ನಿಮಗಿರುವ ಸ್ವಾತಂತ್ರ್ಯವನ್ನು ಶರೀರಾಧೀನ ಸ್ವಭಾವಕ್ಕೆ ಆಸ್ಪದವಾಗಿ ಬಳಸದೆ, ಪ್ರೀತಿಯಿಂದ ಒಬ್ಬರಿಗೊಬ್ಬರು ಸೇವೆ ಮಾಡಿರಿ. “ನಿನ್ನ ನೆರೆಯವನನ್ನು ನಿನ್ನಂತೆಯೇ ಪ್ರೀತಿಸು” ಎಂಬ ಒಂದೇ ಮಾತಿನಲ್ಲಿ ಧರ್ಮಶಾಸ್ತ್ರವೆಲ್ಲಾ ಅಡಗಿದೆ.

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ಗಲಾತ್ಯದವರಿಗೆ *5:16-17, 19-24 (IRV)*

# ಪವಿತ್ರಾತ್ಮನನ್ನು ಅನುಸರಿಸಿ ನಡೆದುಕೊಳ್ಳಿರಿ... ದೇವರಾತ್ಮನಿಂದ ಉಂಟಾಗುವ ಫಲವೇನಂದರೆ, ಪ್ರೀತಿ

**ನಾನು ಹೇಳುವುದೇನಂದರೆ ಪವಿತ್ರಾತ್ಮನನ್ನು ಅನುಸರಿಸಿ ನಡೆದುಕೊಳ್ಳಿರಿ, ಆಗ ನೀವು ಶರೀರಭಾವದ ಅಭಿಲಾಷೆಗಳನ್ನು ಎಷ್ಟು ಮಾತ್ರಕ್ಕೂ ನೆರವೇರಿಸುವುದಿಲ್ಲ. ಏಕೆಂದರೆ ಶರೀರಾಭಿಲಾಷೆಯೂ ಆತ್ಮನಿಗೆ ವಿರುದ್ಧವಾಗಿದೆ, ಆತ್ಮನ ಅಭಿಲಾಷೆಯು ಶರೀರಭಾವಕ್ಕೆ ವಿರುದ್ಧವಾಗಿದೆ. ನೀವು ಮಾಡಲಿಚ್ಛಿಸುವುದನ್ನು ಮಾಡದಂತೆ ಇವು ಒಂದಕ್ಕೊಂದು ಹೋರಾಡುತ್ತವೆ. ... ಶರೀರಭಾವದ ಸ್ವಭಾವಗಳು ಪ್ರತ್ಯಕ್ಷವಾಗಿಯೇ ಇವೆ, ಅದು ಯಾವುವೆಂದರೆ, ಜಾರತ್ವ, ಬಂಡುತನ, ನಾಚಿಕೆಗೇಡಿತನ, ವಿಗ್ರಹಾರಾಧನೆ, ಮಾಟ, ಹಗೆತನ, ಜಗಳ, ಹೊಟ್ಟೆಕಿಚ್ಚು, ಸಿಟ್ಟು, ಪಕ್ಷಪಾತ, ಭಿನ್ನಮತ, ಮತ್ಸರ, ಕುಡುಕುತನ, ಗಲಭೆ, ಢಂಭಾಚಾರ ಇಂಥವುಗಳೇ. ಇಂಥ ಕಾರ್ಯಗಳನ್ನು ನಡಿಸುವವರು ದೇವರ ರಾಜ್ಯಕ್ಕೆ ಬಾಧ್ಯಸ್ಥರಾಗುವುದಿಲ್ಲವೆಂದು ನಾನು ಈ ಮೊದಲು ಹೇಳಿದಂತೆಯೇ ಈಗಲೂ ನಿಮ್ಮನ್ನು ಎಚ್ಚರಿಸುತ್ತೇನೆ. ಆದರೆ ದೇವರಾತ್ಮನಿಂದ ಉಂಟಾಗುವ ಫಲವೇನಂದರೆ, ಪ್ರೀತಿ, ಸಂತೋಷ, ಸಮಾಧಾನ, ದೀರ್ಘಶಾಂತಿ, ದಯೆ, ಪರೋಪಕಾರ, ನಂಬಿಕೆ, ಸಾಧುತ್ವ, ಶಮೆದಮೆ ಇಂಥವುಗಳೇ. ಇವುಗಳಿಗೆ ವಿರುದ್ಧವಾಗಿ ಯಾವ ಧರ್ಮಶಾಸ್ತ್ರವೂ ಇಲ್ಲ. ಕ್ರಿಸ್ತ ಯೇಸುವಿನಲ್ಲಿರುವವರು ತಮ್ಮ ಶರೀರಭಾವವನ್ನು ಅದರ ವಿಷಯಾಭಿಲಾಷೆ, ಸ್ವೇಚ್ಛಾಭಿಲಾಷೆಗಳ ಸಹಿತವಾಗಿ ಶಿಲುಬೆಗೆ ಹಾಕಿದವರಾಗಿದ್ದಾರೆ.**

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

*1 ತಿಮೊಥೆಯನಿಗೆ 2:1-6 (IRV)*

# ಎಲ್ಲಾ ಜನರಿಗೋಸ್ಕರ ದೇವರಿಗೆ ವಿಜ್ಞಾಪನೆಗಳನ್ನೂ, ಪ್ರಾರ್ಥನೆಗಳನ್ನೂ... ನಾವು ಪೂರ್ಣಭಕ್ತಿಯಿಂದಲೂ, ಗೌರವದಿಂದಲೂ ಜೀವಿಸುವಂತೆ

---

ಎಲ್ಲಾದಕ್ಕಿಂತ ಮೊದಲು ಎಲ್ಲಾ ಜನರಿಗೋಸ್ಕರ ದೇವರಿಗೆ ವಿಜ್ಞಾಪನೆಗಳನ್ನೂ, ಪ್ರಾರ್ಥನೆಗಳನ್ನೂ, ಮನವಿಗಳನ್ನೂ, ಕೃತಜ್ಞತಾಸ್ತುತಿಗಳನ್ನೂ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ. ನಮಗೆ ಸುಖಸಮಾಧಾನಗಳು ಉಂಟಾಗಿ ನಾವು ಪೂರ್ಣಭಕ್ತಿಯಿಂದಲೂ, ಗೌರವದಿಂದಲೂ ಜೀವಿಸುವಂತೆ, ಅರಸುಗಳಿಗಾಗಿಯೂ ಎಲ್ಲಾ ಅಧಿಕಾರಿಗಳಿಗಾಗಿಯೂ ವಿಜ್ಞಾಪನೆಗಳನ್ನು ಮಾಡಬೇಕು. ಹಾಗೆ ಮಾಡುವುದು ನಮ್ಮ ರಕ್ಷಕನಾದ ದೇವರ ಸನ್ನಿಧಿಯಲ್ಲಿ ಒಳ್ಳೆಯದು, ಮೆಚ್ಚಿಕೆಯಾಗಿಯೂ ಇದೆ. ಎಲ್ಲಾ ಜನರೂ ರಕ್ಷಣೆಯನ್ನು ಹೊಂದಿ ಸತ್ಯದ ಜ್ಞಾನಕ್ಕೆ ಸೇರಬೇಕೆಂಬುದೇ ಆತನ ಚಿತ್ತವಾಗಿದೆ. ಏಕೆಂದರೆ ದೇವರು ಒಬ್ಬನೇ, ದೇವರಿಗೂ ಮನುಷ್ಯರಿಗೂ ಮಧ್ಯಸ್ಥನು ಒಬ್ಬನೇ, ಆತನು ಮನುಷ್ಯನಾಗಿರುವ ಕ್ರಿಸ್ತ ಯೇಸುವೇ. ಆತನು ಎಲ್ಲರ ವಿಮೋಚನಾರ್ಥವಾಗಿ ತನ್ನನ್ನು ಒಪ್ಪಿಸಿಕೊಟ್ಟನು. ಇದೇ ತಕ್ಕ ಸಮಯಗಳಲ್ಲಿ ಹೇಳಬೇಕಾದ ಸಾಕ್ಷಿಯಾಗಿದೆ.

**_Spiritual Warfare Cards.com_**

*Indian Revised Version · CC BY-SA 4.0 · Bridge Connectivity Solutions*

# ವಾಸ್ತವವಾದ ಜೀವವನ್ನು ಹೊಂದುವುದಕ್ಕೋಸ್ಕರ… ನಿನ್ನ ವಶಕ್ಕೆ ಕೊಟ್ಟಿರುವುದನ್ನು ಕಾಪಾಡಿಕೋ

ಇಹಲೋಕ ವಿಷಯದಲ್ಲಿ ಐಶ್ವರ್ಯವುಳ್ಳವರು ಅಹಂಕಾರಿಗಳಾಗಿರದೆ, ಅಸ್ಥಿರವಾದ ಐಶ್ವರ್ಯದ ಮೇಲೆ ನಿರೀಕ್ಷೆಯನ್ನಿಡದೆ, ನಮ್ಮ ಅನುಭೋಗಕ್ಕೋಸ್ಕರ ನಮಗೆ ಎಲ್ಲವನ್ನೂ ಹೇರಳವಾಗಿ ದಯಪಾಲಿಸುವ ದೇವರ ಮೇಲೆ ನಿರೀಕ್ಷೆಯನ್ನಿಡಬೇಕು. ವಾಸ್ತವವಾದ ಜೀವವನ್ನು ಹೊಂದುವುದಕ್ಕೋಸ್ಕರ ಅವರು ಒಳ್ಳೆಯದನ್ನು ಮಾಡುವವರೂ, ಸತ್ಕಾರ್ಯಗಳನ್ನು ಮಾಡುವುದರಲ್ಲಿ ಐಶ್ವರ್ಯವಂತರೂ, ಉದಾರಶೀಲರೂ, ಪರೋಪಕಾರಮಾಡುವವರೂ ಆಗಿದ್ದು, ಮುಂದಿನ ಕಾಲಕ್ಕೆ ಒಳ್ಳೆ ಅಸ್ತಿವಾರವಾಗುವಂಥವುಗಳನ್ನು ತಮಗೆ ಕೂಡಿಸಿಟ್ಟುಕೊಳ್ಳಬೇಕೆಂದು ಅವರಿಗೆ ಆಜ್ಞಾಪಿಸು. ಎಲೈ ತಿಮೊಥೆಯನೇ, ಜ್ಞಾನೋಪದೇಶವೆಂದು ಸುಳ್ಳಾಗಿ ಹೇಳಿಕೊಳ್ಳುವ ಬೋಧನೆಗೆ ಸಂಬಂಧಪಟ್ಟ, ಪ್ರಾಪಂಚಿಕವಾದ ಆ ಹರಟೆ ಮಾತುಗಳಿಗೂ, ವಿವಾದಗಳಿಗೂ ನೀನು ದೂರವಾಗಿದ್ದು ನಿನ್ನ ವಶಕ್ಕೆ ಕೊಟ್ಟಿರುವುದನ್ನು ಕಾಪಾಡಿಕೋ.

**Spiritual Warfare Cards.com**

Indian Revised Version · CC BY-SA 4.0 · Bridge Connectivity Solutions

*2 ತಿಮೊಥೆಯನಿಗೆ 1:9-10, 13-14 (IRV)*

# ನಮ್ಮನ್ನು ರಕ್ಷಿಸಿ ಪರಿಶುದ್ಧರಾಗುವುದಕ್ಕೆ ಕರೆದನು... ನನ್ನಿಂದ ಕೇಳಿದ ಸ್ವಸ್ಥಬೋಧನಾ ವಾಕ್ಯಗಳನ್ನು ಮಾದರಿಯಾಗಿಟ್ಟುಕೊಂಡು ಅನುಸರಿಸು

---

ಆತನು ನಮ್ಮಲ್ಲಿರುವ ಸುಕೃತ್ಯಗಳನ್ನು ನೋಡಿದ್ದರಿಂದಲ್ಲ, ತನ್ನ ಸಂಕಲ್ಪವನ್ನು ಅನುಸರಿಸಿ ಕೃಪೆಯಿಂದಲೇ ನಮ್ಮನ್ನು ರಕ್ಷಿಸಿ ಪರಿಶುದ್ಧರಾಗುವುದಕ್ಕೆ ಕರೆದನು. ಆತನು ಅನಾದಿಕಾಲದಲ್ಲಿ ಆ ಕೃಪೆಯನ್ನು ಕ್ರಿಸ್ತ ಯೇಸುವಿನಲ್ಲಿ ನಮಗೆ ಅನುಗ್ರಹಿಸಿ, ಈಗ ನಮ್ಮ ರಕ್ಷಕನಾದ ಕ್ರಿಸ್ತ ಯೇಸುವಿನ ಪ್ರತ್ಯಕ್ಷತೆಯ ಮೂಲಕ ಅದನ್ನು ಪ್ರಕಟಪಡಿಸಿದ್ದಾನೆ. ಈತನು ಮರಣವನ್ನು ನಿರ್ಮೂಲಗೊಳಿಸಿ ಸುವಾರ್ತೆಯ ಮೂಲಕ ಜೀವವನ್ನೂ ಅಮರತ್ವವನ್ನೂ ಬೆಳಕಿಗೆ ತಂದಿದ್ದಾನೆ. … ನೀನು ಕ್ರಿಸ್ತ ಯೇಸುವಿನಲ್ಲಿ ನಂಬಿಕೆಯೂ ಪ್ರೀತಿಯೂ ಉಳ್ಳವನಾಗಿ, ನನ್ನಿಂದ ಕೇಳಿದ ಸ್ವಸ್ಥಬೋಧನಾ ವಾಕ್ಯಗಳನ್ನು ಮಾದರಿಯಾಗಿಟ್ಟುಕೊಂಡು ಅನುಸರಿಸು. ನಿನ್ನ ವಶಕ್ಕೆ ಒಪ್ಪಿಸಿಕೊಟ್ಟಿರುವ ಒಳ್ಳೆಯ ವಿಷಯವನ್ನು ನಮ್ಮಲ್ಲಿ ವಾಸವಾಗಿರುವ ಪವಿತ್ರಾತ್ಮನ ಮೂಲಕವಾಗಿ ಕಾಪಾಡಿಕೋ.

**Spiritual Warfare Cards.com**

*Indian Revised Version · CC BY-SA 4.0 · Bridge Connectivity Solutions*

*2 ತಿಮೊಥೆಯನಿಗೆ 3:16-17; 2 ಪೇತ್ರನು 1:19-21 (IRV)*

# ಪ್ರತಿಯೊಂದು ಶಾಸ್ತ್ರವು... ನೀತಿಶಿಕ್ಷೆಗೂ ಉಪಯುಕ್ತವಾಗಿದೆ

**ದೈವ ಪ್ರೇರಿತವಾದ ಪ್ರತಿಯೊಂದು ಶಾಸ್ತ್ರವು ಉಪದೇಶಕ್ಕೂ, ಖಂಡನೆಗೂ, ತಿದ್ದುಪಡಿಗೂ, ನೀತಿಶಿಕ್ಷೆಗೂ ಉಪಯುಕ್ತವಾಗಿದೆ. ಆದ್ದರಿಂದ ದೇವರ ಮನುಷ್ಯನು ಎಲ್ಲವನ್ನೂ ಬಲ್ಲವನಾಗಿದ್ದು ಸಕಲಸತ್ಕಾರ್ಯಗಳಿಗೆ ಸನ್ನದ್ಧನಾಗುವನು. ... ಇದಲ್ಲದೆ ಪ್ರವಾದನವಾಕ್ಯವು ನಮಗೆ ಬಹುದೃಢವಾಗಿ ದೊರೆತಿದೆ. ಆ ದಿನವು ಅರುಣೋದಯವಾಗುವರೆಗೆ ಮತ್ತು ಉದಯ ನಕ್ಷತ್ರವು ನಿಮ್ಮ ಹೃದಯಗಳಲ್ಲಿ ಮೂಡುವತನಕ ಅದನ್ನು ಕತ್ತಲೆಯಾದ ಸ್ಥಳದಲ್ಲಿ ಪ್ರಕಾಶಿಸುವ ದೀಪವೆಂದೆಣಿಸಿ ಅದಕ್ಕೆ ಲಕ್ಷ್ಯಕೊಟ್ಟರೆ ಒಳ್ಳೆಯದು. ಯಾವ ಪ್ರವಾದನಾ ವಾಕ್ಯವೂ ಕೇವಲ ಮನುಷ್ಯನ ಸ್ವಬುದ್ಧಿಯಿಂದ ವಿವರಿಸತಕ್ಕಂಥದ್ದಲ್ಲವೆಂಬುದನ್ನು ಮುಖ್ಯವಾಗಿ ಮೊದಲು ತಿಳಿದುಕೊಳ್ಳಿರಿ. ಏಕೆಂದರೆ ಯಾವ ಪ್ರವಾದನೆಯೂ ಎಂದೂ ಮನುಷ್ಯರ ಚಿತ್ತದಿಂದ ಉಂಟಾಗಲಿಲ್ಲ. ಆದರೆ ಮನುಷ್ಯರು ಪವಿತ್ರಾತ್ಮಪ್ರೇರಿತರಾಗಿ ದೇವರಿಂದ ಹೊಂದಿದ್ದನ್ನೇ ಮಾತನಾಡಿರುವುದು.**

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ಯಾಕೋಬನು *1:17, 19-22 (IRV)*

# ಎಲ್ಲಾ ಒಳ್ಳೆಯ ವರಗಳು ಮತ್ತು ಪರಿಪೂರ್ಣವಾದ ವರಗಳು ಮೇಲಿನಿಂದ ಬಂದವುಗಳೇ… ಮನಸ್ಸಿನೊಳಗೆ ಬೇರೂರಿರುವ ದೇವರ ವಾಕ್ಯವನ್ನು ನಮ್ರತೆಯಿಂದ ಸ್ವೀಕರಿಸಿರಿ

ಎಲ್ಲಾ ಒಳ್ಳೆಯ ವರಗಳು ಮತ್ತು ಪರಿಪೂರ್ಣವಾದ ವರಗಳು ಮೇಲಿನಿಂದ ಬಂದವುಗಳೇ, ಅವು ಸಕಲ ವಿಧವಾದ ಬೆಳಕಿಗೆ ಮೂಲಕರ್ತನಾದ ದೇವರಿಂದ ಇಳಿದು ಬರುತ್ತವೆ; ಆತನು ನೆರಳಿನಂತೆ ಬದಲಾಗುವವನಲ್ಲ, ಚಂಚಲಚಿತ್ತನೂ ಅಲ್ಲ. … ನನ್ನ ಪ್ರಿಯ ಸಹೋದರರೇ, ನೀವು ಇದನ್ನು ಚೆನ್ನಾಗಿ ತಿಳಿದುಕೊಳ್ಳಿರಿ, ಪ್ರತಿಯೊಬ್ಬನೂ ಕಿವಿಗೊಡುವುದರಲ್ಲಿ ಚುರುಕಾಗಿಯೂ, ಮಾತನಾಡುವುದರಲ್ಲಿ ನಿಧಾನವಾಗಿಯೂ ಮತ್ತು ಕೋಪಿಸುವುದರಲ್ಲಿ ನಿಧಾನವಾಗಿಯೂ ಇರಲಿ. ಏಕೆಂದರೆ ಮನುಷ್ಯನು ಕೋಪಗೊಂಡಾಗ ದೇವರು ಬಯಸುವ ನೀತಿ ಕಾರ್ಯಗಳನ್ನು ಮಾಡಲು ಸಾಧ್ಯವಾಗುವುದಿಲ್ಲ. ಆದಕಾರಣ ಎಲ್ಲಾ ನೀಚತನವನ್ನೂ, ಎಲ್ಲಾ ದುಷ್ಟತನವನ್ನೂ ತೆಗೆದುಹಾಕಿ ಮನಸ್ಸಿನೊಳಗೆ ಬೇರೂರಿರುವ ದೇವರ ವಾಕ್ಯವನ್ನು ನಮ್ರತೆಯಿಂದ ಸ್ವೀಕರಿಸಿರಿ. ಅದು ನಿಮ್ಮ ಆತ್ಮಗಳನ್ನು ರಕ್ಷಿಸುವುದಕ್ಕೆ ಸಾಮರ್ಥ್ಯವುಳ್ಳದ್ದಾಗಿರುತ್ತದೆ. ದೇವರ ವಾಕ್ಯದ ಪ್ರಕಾರ ನಡೆಯುವವರಾಗಿರಿ, ಅದನ್ನು ಕೇವಲ ಕೇಳುವವರು ಮಾತ್ರವೇ ಆಗಿದ್ದು ನಿಮ್ಮನ್ನು ನೀವೇ ಮೋಸಗೊಳಿಸಿಕೊಳ್ಳಬೇಡಿರಿ.

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ಯಾಕೋಬನು *4:4, 6-8, 10, 12 (IRV)*

# ದೇವರು ಅಹಂಕಾರಿಗಳಿಗೆ ಎದುರಾಳಿಯಾಗಿದ್ದಾನೆ, ದೀನರಿಗಾದರೋ ಕೃಪೆಯನ್ನು ಅನುಗ್ರಹಿಸುತ್ತಾನೆ… ದೇವರ ಸಮೀಪಕ್ಕೆ ಬನ್ನಿರಿ… ಕರ್ತನ ಮುಂದೆ ನಿಮ್ಮನ್ನು ತಗ್ಗಿಸಿಕೊಳ್ಳಿರಿ; ಆಗ ಆತನು ನಿಮ್ಮನ್ನು ಮೇಲಕ್ಕೆತ್ತುವನು

---

ವ್ಯಭಿಚಾರಿಗಳೇ, ಇಹಲೋಕದ ಗೆಳೆತನವು ದೇವರಿಗೆ ಹಗೆತನವೆಂದು ನಿಮಗೆ ತಿಳಿಯದೋ? ಆದ್ದರಿಂದ ಲೋಕಕ್ಕೆ ಸ್ನೇಹಿತನಾಗಿರಬೇಕೆಂದಿರುವವನು ತನ್ನನ್ನು ದೇವರಿಗೆ ವಿರೋಧಿಯನ್ನಾಗಿ ಮಾಡಿಕೊಳ್ಳುತ್ತಾನೆ. … ಆತನು ನಮಗೆ ಹೆಚ್ಚಾದ ಕೃಪೆಯನ್ನು ಕೊಡುತ್ತಾನೆ. ಆದುದರಿಂದ, "ದೇವರು ಅಹಂಕಾರಿಗಳಿಗೆ ಎದುರಾಳಿಯಾಗಿದ್ದಾನೆ, ದೀನರಿಗಾದರೋ ಕೃಪೆಯನ್ನು ಅನುಗ್ರಹಿಸುತ್ತಾನೆ" ಎಂದು ಧರ್ಮಶಾಸ್ತ್ರವು ಹೇಳುತ್ತದೆ. ಹೀಗಿರಲಾಗಿ ದೇವರಿಗೆ ಅಧೀನರಾಗಿದ್ದು ಸೈತಾನನನ್ನು ಎದುರಿಸಿರಿ, ಆಗ ಅವನು ನಿಮ್ಮನ್ನು ಬಿಟ್ಟು ಓಡಿ ಹೋಗುವನು. ದೇವರ ಸಮೀಪಕ್ಕೆ ಬನ್ನಿರಿ, ಆಗ ಆತನು ನಿಮ್ಮ ಸಮೀಪಕ್ಕೆ ಬರುವನು. ಪಾಪಿಗಳೇ, ನಿಮ್ಮ ಕೈಗಳನ್ನು ಶುಚಿಮಾಡಿಕೊಳ್ಳಿರಿ; ಎರಡು ಮನಸ್ಸುಳ್ಳವರೇ, ನಿಮ್ಮ ಹೃದಯಗಳನ್ನು ನಿರ್ಮಲಮಾಡಿಕೊಳ್ಳಿರಿ. … ಕರ್ತನ ಮುಂದೆ ನಿಮ್ಮನ್ನು ತಗ್ಗಿಸಿಕೊಳ್ಳಿರಿ; ಆಗ ಆತನು ನಿಮ್ಮನ್ನು ಮೇಲಕ್ಕೆತ್ತುವನು. … ಧರ್ಮಶಾಸ್ತ್ರವನ್ನು ಕೊಟ್ಟಂಥ ನ್ಯಾಯಾಧಿಪತಿ ಒಬ್ಬನೇ; ಆತನೇ ಉಳಿಸುವುದಕ್ಕೂ ನಾಶಮಾಡುವುದಕ್ಕೂ ಸಮರ್ಥನು. ಹೀಗಿರುವಾಗ ನಿನ್ನ ನೆರೆಯವನ ವಿಷಯದಲ್ಲಿ ತೀರ್ಪುಮಾಡುವುದಕ್ಕೆ ನೀನು ಯಾರು?

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ಯಾಕೋಬನು 4:13-17 (IRV)

# ನಾಳೆ ಏನಾಗುವುದೋ ನಿಮಗೆ ತಿಳಿಯದು... ಕರ್ತನ ಚಿತ್ತವಾದರೆ ನಾವು ಬದುಕಿ... ಅಂಥ ಹೊಗಳಿಕೆಯೆಲ್ಲಾ ಕೆಟ್ಟದ್ದೇ

"ಈಹೊತ್ತು ಇಲ್ಲವೆ ನಾಳೆ ನಾವು ಇಂಥ ಪಟ್ಟಣಕ್ಕೆ ಹೋಗಿ ಅಲ್ಲಿ ಒಂದು ವರ್ಷವಿದ್ದು ವ್ಯಾಪಾರ ಮಾಡಿ ಲಾಭವನ್ನು ಸಂಪಾದಿಸುತ್ತೇವೆ" ಎನ್ನುವವರೇ ಕೇಳಿರಿ. ನಾಳೆ ಏನಾಗುವುದೋ ನಿಮಗೆ ತಿಳಿಯದು. ನಿಮ್ಮ ಜೀವಮಾನವು ಎಂಥದ್ದು? ನೀವು ಸ್ವಲ್ಪ ಹೊತ್ತು ಕಾಣಿಸಿಕೊಂಡು ಆಮೇಲೆ ಕಾಣದೆ ಹೋಗುವ ಹಬೆಯಂತಿದ್ದೀರಿ. ಆದುದರಿಂದ ನೀವು ಅಂಥ ಮಾತನ್ನು ಬಿಟ್ಟು "ಕರ್ತನ ಚಿತ್ತವಾದರೆ ನಾವು ಬದುಕಿ ಈ ಕೆಲಸವನ್ನಾಗಲಿ ಆ ಕೆಲಸವನ್ನಾಗಲಿ ಮಾಡುವೆವು" ಎಂದು ಹೇಳಬೇಕು. ಆದರೆ ನೀವು ನಿಮ್ಮ ಅಹಂನಿಂದ ಹೊಗಳಿಕೊಳ್ಳುತ್ತೀರಿ. ಅಂಥ ಹೊಗಳಿಕೆಯೆಲ್ಲಾ ಕೆಟ್ಟದ್ದೇ. ಹೀಗಿರುವುದರಿಂದ ಒಳ್ಳೆಯದನ್ನು ಮಾಡಬೇಕೆಂದು ಗೊತ್ತಿದ್ದರೂ ಅದನ್ನು ಮಾಡದೆ ಇರುವವನು ಪಾಪ ಮಾಡುವವನಾಗಿದ್ದಾನೆ.

*Spiritual Warfare Cards.com*

*Indian Revised Version · CC BY-SA 4.0 · Bridge Connectivity Solutions*

ಯೂದನು *1:1-2, 20-21, 24-25 (IRV)*

# ನಿಮಗೆ ಕರುಣೆಯೂ, ಶಾಂತಿಯೂ, ಪ್ರೀತಿಯೂ ಹೆಚ್ಚಾಗಿ ದೊರೆಯಲಿ… ಅತಿ ಪರಿಶುದ್ಧವಾದ ಕ್ರಿಸ್ತ ನಂಬಿಕೆಯನ್ನು ಆಧಾರವಾಗಿಟ್ಟುಕೊಂಡು ಅಭಿವೃದ್ಧಿಹೊಂದುತ್ತಾ

**ಯೇಸು ಕ್ರಿಸ್ತನ ಸೇವಕನೂ, ಯಾಕೋಬನ ತಮ್ಮನೂ ಆಗಿರುವ ಯೂದನು ಕರೆಯಲ್ಪಟ್ಟವರಿಗೆ, ತಂದೆಯಾದ ದೇವರಲ್ಲಿ ಪ್ರಿಯರಾದವರಿಗೆ, ಯೇಸು ಕ್ರಿಸ್ತನಿಗಾಗಿ ಕಾಪಾಡಲ್ಪಟ್ಟವರಿಗೆ ಬರೆಯುವುದೇನೆಂದರೆ, ನಿಮಗೆ ಕರುಣೆಯೂ, ಶಾಂತಿಯೂ, ಪ್ರೀತಿಯೂ ಹೆಚ್ಚಾಗಿ ದೊರೆಯಲಿ. … ಪ್ರಿಯರೇ, ನೀವಾದರೋ ನಿಮಗಿರುವ ಅತಿ ಪರಿಶುದ್ಧವಾದ ಕ್ರಿಸ್ತ ನಂಬಿಕೆಯನ್ನು ಆಧಾರವಾಗಿಟ್ಟುಕೊಂಡು ಅಭಿವೃದ್ಧಿಹೊಂದುತ್ತಾ, ಪವಿತ್ರಾತ್ಮಪ್ರೇರಿತರಾಗಿ ಪ್ರಾರ್ಥನೆ ಮಾಡಿರಿ. ನಿತ್ಯಜೀವಕ್ಕಾಗಿ ನಮ್ಮ ಕರ್ತನಾದ ಯೇಸುಕ್ರಿಸ್ತನ ಕರುಣೆಯನ್ನು ಎದುರುನೋಡುತ್ತಾ, ನಿಮ್ಮನ್ನು ದೇವರ ಪ್ರೀತಿಯಲ್ಲಿ ಕಾಪಾಡಿಕೊಳ್ಳಿರಿ. … ಮುಗ್ಗರಿಸದಂತೆ ನಿಮ್ಮನ್ನು ಕಾಪಾಡಿಕೊಳ್ಳುತ್ತಾ, ತನ್ನ ಮಹಿಮೆಯ ಸಮಕ್ಷಮದಲ್ಲಿ ನಿಮ್ಮನ್ನು ನಿರ್ದೋಷಿಗಳನ್ನಾಗಿ, ಅತ್ಯಂತ ಹರ್ಷದೊಡನೆ ನಿಲ್ಲಿಸುವುದಕ್ಕೂ ಶಕ್ತನಾಗಿರುವ, ನಮ್ಮ ರಕ್ಷಕನಾದ ಒಬ್ಬನೇ ದೇವರಿಗೆ, ನಮ್ಮ ಕರ್ತನಾದ ಯೇಸು ಕ್ರಿಸ್ತನ ಮೂಲಕ ಮಹಿಮೆ, ಮಹತ್ವ, ಅಧಿಪತ್ಯ ಮತ್ತು ಅಧಿಕಾರಗಳು ಎಲ್ಲಾ ಕಾಲಗಳಲ್ಲಿ ಮೊದಲು ಇದ್ದ ಹಾಗೆ ಈಗಲೂ ಯಾವಾಗಲೂ ಸಲ್ಲಲ್ಲಿ. ಆಮೆನ್.**

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ವಿಮೋಚನಕಾಂಡ *20:2-8, 12-17, 20 (IRV)*

# ನಾನೇ ನಿನ್ನ ದೇವರು... ನಾನಲ್ಲದೆ ನಿಮಗೆ ಬೇರೆ ದೇವರುಗಳು ಇರಬಾರದು... ಸಾವಿರ ತಲೆಗಳವರೆಗೆ ದಯೆತೋರಿಸುವೆನು

“ನೀನು ಗುಲಾಮತನದಲ್ಲಿದ್ದ ಐಗುಪ್ತ ದೇಶದೊಳಗಿಂದ ನಿನ್ನನ್ನು ಬಿಡುಗಡೆಮಾಡಿದ ಯೆಹೋವನು ಎಂಬ ‘ನಾನೇ ನಿನ್ನ ದೇವರು’ ನಾನಲ್ಲದೆ ನಿಮಗೆ ಬೇರೆ ದೇವರುಗಳು ಇರಬಾರದು. “ಯಾವ ಮೂರ್ತಿಯನ್ನೂ ಮಾಡಿಕೊಳ್ಳಬಾರದು. ಆಕಾಶದಲ್ಲಾಗಲಿ, ಭೂಮಿಯಲ್ಲಾಗಲಿ, ಭೂಮಿಯ ಕೆಳಗಣ ನೀರಿನಲ್ಲಾಗಲಿ ಇರುವ ಯಾವುದರ ರೂಪವನ್ನೂ ಮಾಡಿಕೊಳ್ಳಬಾರದು. ಅವುಗಳಿಗೆ ಅಡ್ಡ ಬೀಳಬಾರದು, ಪೂಜೆ ಮಾಡಬಾರದು. ನಿನ್ನ ದೇವರಾದ ಯೆಹೋವನೆಂಬ ನಾನು ನನಗೆ ಸಲ್ಲತಕ್ಕ ಗೌರವವನ್ನು ಮತ್ತೊಬ್ಬನಿಗೆ ಬಿಟ್ಟುಕೊಡುವುದಿಲ್ಲ. ಆದುದರಿಂದ ನನ್ನನ್ನು ದ್ವೇಷಿಸುವವರ ವಿಷಯದಲ್ಲಿ ತಂದೆಗಳ ದೋಷಫಲವನ್ನು ಮಕ್ಕಳ ಮೇಲೆ, ಮೂರು ನಾಲ್ಕು ತಲೆಗಳವರೆಗೆ ಬರಮಾಡುವೆನು. ನನ್ನನ್ನು ಪ್ರೀತಿಸಿ ನನ್ನ ಆಜ್ಞೆಗಳನ್ನು ಕೈಗೊಳ್ಳುವವರಿಗಾದರೋ ಸಾವಿರ ತಲೆಗಳವರೆಗೆ ದಯೆತೋರಿಸುವೆನು. ನಿನ್ನ ದೇವರಾದ ಯೆಹೋವನ ಹೆಸರನ್ನು ಅಯೋಗ್ಯಕಾರ್ಯಕ್ಕಾಗಿ ಎತ್ತಬಾರದು. ಯೆಹೋವನು ತನ್ನ ಹೆಸರನ್ನು ಅಯೋಗ್ಯಕಾರ್ಯಕ್ಕಾಗಿ ಎತ್ತುವವನನ್ನು ಶಿಕ್ಷಿಸದೆ ಬಿಡುವುದಿಲ್ಲ. “ಸಬ್ಬತ್ ದಿನವನ್ನು ದೇವರ ದಿನವೆಂದು ಆಚರಣೆಗೆ ತರುವುದಕ್ಕೆ ನೆನಪಿನಲ್ಲಿಟ್ಟುಕೊಳ್ಳಬೇಕು. … “ನಿನ್ನ ತಂದೆತಾಯಿಗಳನ್ನು ಸನ್ಮಾನಿಸಬೇಕು, ಸನ್ಮಾನಿಸಿದರೆ ನಿನ್ನ ದೇವರಾದ ಯೆಹೋವನು ನಿನಗೆ ಅನುಗ್ರಹಿಸುವ ದೇಶದಲ್ಲಿ ನೀನು ಬಹುಕಾಲ ಬದುಕುವಿ. “ಕೊಲೆ ಮಾಡಬಾರದು. “ವ್ಯಭಿಚಾರಮಾಡಬಾರದು. “ಕದಿಯಬಾರದು. “ಮತ್ತೊಬ್ಬನ ಮೇಲೆ ಸುಳ್ಳುಸಾಕ್ಷಿ ಹೇಳಬಾರದು. “ಮತ್ತೊಬ್ಬನ ಮನೆಯನ್ನು ನೋಡಿ ಆಶೆಪಡಬಾರದು. ಮತ್ತೊಬ್ಬನ ಹೆಂಡತಿ, ಗಂಡಾಳು, ಹೆಣ್ಣಾಳು, ಎತ್ತು, ಕತ್ತೆ ಮುಂತಾದ ಯಾವುದನ್ನೂ ಬಯಸಬಾರದು.” … ಅದಕ್ಕೆ ಮೋಶೆಯು ಜನರಿಗೆ, “ಭಯಪಡಬೇಡಿರಿ, ದೇವರು ನಿಮ್ಮನ್ನು ಪರೀಕ್ಷಿಸುವುದಕ್ಕಾಗಿ, ನೀವು ಪಾಪ ಮಾಡದಂತೆ ಆತನ ಮೇಲಿನ ಭಯವು ನಿಮಗೆ ಇರಬೇಕೆಂತಲೂ ಇಳಿದು ಬಂದಿದ್ದಾನೆ” ಎಂದನು.



*Indian Revised Version · CC BY-SA 4.0 · Bridge Connectivity Solutions*

ಯೆಹೋಶುವನು *1:7-11 (IRV)*

# ಸ್ಥಿರಚಿತ್ತನಾಗಿರು, ಪೂರ್ಣಧೈರ್ಯದಿಂದಿರು… ಹಗಲಿರುಳು ಅದನ್ನು ಧ್ಯಾನಿಸುತ್ತಾ… ನೀನು ಹೋಗುವಲ್ಲೆಲ್ಲಾ ನಿನ್ನ ದೇವರಾದ ಯೆಹೋವನು ನಿನ್ನ ಸಂಗಡ ಇರುವನು

---

ನನ್ನ ಸೇವಕನಾದ ಮೋಶೆಯು ನಿನಗೆ ಬೋಧಿಸಿ ಆಜ್ಞಾಪಿಸಿದ ಧರ್ಮೋಪದೇಶವನ್ನೆಲ್ಲಾ ಕೈಕೊಂಡು ನಡೆಯುವುದರಲ್ಲಿ ಸ್ಥಿರಚಿತ್ತನಾಗಿರು, ಪೂರ್ಣಧೈರ್ಯದಿಂದಿರು. ಅದನ್ನು ಬಿಟ್ಟು ಎಡಕ್ಕಾಗಲಿ ಬಲಕ್ಕಾಗಲಿ ತಿರುಗಬೇಡ, ಆಗ ನೀನು ಸಫಲನಾಗುವಿ. ಈ ಧರ್ಮಶಾಸ್ತ್ರವು ಯಾವಾಗಲೂ ನಿನ್ನ ಬಾಯಲ್ಲಿರಲಿ; ಹಗಲಿರುಳು ಅದನ್ನು ಧ್ಯಾನಿಸುತ್ತಾ ಅದರಲ್ಲಿ ಬರೆದಿರುವುದನ್ನೆಲ್ಲಾ ಕೈಕೊಂಡು ನಡೆ. ಆಗ ನಿನ್ನ ಕಾರ್ಯವೆಲ್ಲವೂ, ನೀನು ಹೋಗುವ ಮಾರ್ಗಗಳು ಸಫಲವಾಗುವುದು. ನೀನು ಚುರುಕು ಬುದ್ಧಿಯ ವ್ಯಕ್ತಿಯಾಗಿ ರೂಪಾಂತರ ಹೊಂದುವಿ. ನಾನು ನಿನಗೆ ಆಜ್ಞಾಪಿಸಿದಂತೆ ಸ್ಥಿರಚಿತ್ತನಾಗಿರು, ಧೈರ್ಯದಿಂದಿರು, ಅಂಜಬೇಡ, ಕಳವಳಗೊಳ್ಳಬೇಡ. ನೀನು ಹೋಗುವಲ್ಲೆಲ್ಲಾ ನಿನ್ನ ದೇವರಾದ ಯೆಹೋವನು ನಿನ್ನ ಸಂಗಡ ಇರುವನು" ಎಂದು ಹೇಳಿದನು. ಆಗ ಯೆಹೋಶುವನು ಜನರ ಅಧಿಕಾರಿಗಳಿಗೆ "ನೀವು ಪಾಳೆಯದ ಎಲ್ಲೆಡೆಗೆ ಹೋಗಿ ನಿಮ್ಮ ಜನರಿಗೆ 'ನೀವು ಇನ್ನು ಮೂರು ದಿನಗಳಲ್ಲಿ ಈ ಯೊರ್ದನ್ ನದಿಯನ್ನು ದಾಟಿ ನಿಮ್ಮ ದೇವರಾದ ಯೆಹೋವನು ನಿಮಗೆ ಸ್ವತ್ತಾಗಿ ಕೊಡುವ ದೇಶವನ್ನು ವಶಪಡಿಸಿಕೊಳ್ಳಲು ಹೋಗಬೇಕು. ಆದುದರಿಂದ ನಿಮಗೆ ಬೇಕಾದ ಆಹಾರವನ್ನು ಸಿದ್ಧಮಾಡಿಕೊಳ್ಳಿರಿ' ಎಂದು ತಿಳಿಸಿರಿ" ಅಂದನು.

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

*1 ಸಮುವೇಲನು 16:7; 2 ಸಮುವೇಲನು 7:18, 13, 23, 22 (IRV)*

# ಯೆಹೋವನು ಮನುಷ್ಯರಂತೆ ಹೊರಗಿನ ತೋರಿಕೆಯನ್ನು ನೋಡದೆ ಹೃದಯದ ಮತ್ತು ಅಂತರಂಗದ ಸೌಂದರ್ಯ ನೋಡುವವನಾಗಿದ್ದಾನೆ

ಆದರೆ ಯೆಹೋವನು ಸಮುವೇಲನಿಗೆ, “ನೀನು ಅವನ ಸೌಂದರ್ಯವನ್ನೂ, ಎತ್ತರವನ್ನೂ ನೋಡಬೇಡ; ನಾನು ಅವನನ್ನು ನಿರಾಕರಿಸಿದ್ದೇನೆ. ಯೆಹೋವನು ಮನುಷ್ಯರಂತೆ ಹೊರಗಿನ ತೋರಿಕೆಯನ್ನು ನೋಡದೆ ಹೃದಯದ ಮತ್ತು ಅಂತರಂಗದ ಸೌಂದರ್ಯ ನೋಡುವವನಾಗಿದ್ದಾನೆ” ಅಂದನು. … ಅನಂತರ ದಾವೀದನು ಹೋಗಿ ಯೆಹೋವನ ಸನ್ನಿಧಿಯಲ್ಲಿ ಕುಳಿತುಕೊಂಡು, “ಕರ್ತನಾದ, ಯೆಹೋವನೇ, ನಾನೆಷ್ಟರವನು? ನನ್ನ ಮನೆ ಎಷ್ಟರದು? ನೀನು ನನ್ನನ್ನು ಇಲ್ಲಿಯವರೆಗೂ ತಂದಿದ್ದೀಯಲ್ಲಾ. … ಅವನು ನನ್ನ ಹೆಸರಿಗಾಗಿ ಒಂದು ಮನೆಯನ್ನು ಕಟ್ಟುವನು. ನಾನು ಅವನ ರಾಜ್ಯದ ಸಿಂಹಾಸನವನ್ನು ನಿರಂತರವಾಗಿ ಸ್ಥಿರಪಡಿಸುವೆನು. … ನಿನ್ನ ಇಸ್ರಾಯೇಲಿನ ಪ್ರಜೆಗೆ ಸಮಾನವಾದ ಜನಾಂಗವು ಲೋಕದಲ್ಲಿ ಯಾವುದಿದೆ? ನೀನೇ ಹೋಗಿ ಅದನ್ನು ವಿಮೋಚಿಸಿ, ಸ್ವಪ್ರಜೆಯನ್ನಾಗಿ ಮಾಡಿಕೊಂಡು, ನಿನ್ನ ಹೆಸರನ್ನು ಪ್ರಸಿದ್ಧಪಡಿಸಿಕೊಂಡಿದ್ದಿ. ಐಗುಪ್ತರು ಮೊದಲಾದ ಅನ್ಯಜನರ ಕೈಗೂ ಅವರ ದೇವತೆಗಳ ಕೈಗೂ ಸಿಕ್ಕದಂತೆ ತಪ್ಪಿಸಿ, ರಕ್ಷಿಸಿ, ಅವರ ಎದುರಿನಲ್ಲೇ ನಿನ್ನ ದೇಶಕ್ಕೋಸ್ಕರ ಭಯಂಕರವಾದ ಮಹತ್ಕಾರ್ಯಗಳನ್ನು ನಡಿಸಿದಿ. … ದೇವರೇ, ಯೆಹೋವನೇ! ನೀನೇ ಮಹೋನ್ನತನು. ನಿನ್ನ ಸಮಾನರು ಯಾರೂ ಇಲ್ಲ. ನಾವು ಕೇಳಿದವುಗಳನ್ನೆಲ್ಲಾ ನೀನು ನಮಗೆ ನೀಡಿದ್ದೆಲ್ಲವನ್ನು ಆಲೋಚಿಸಿ ನೋಡಿದರೆ ನಿನ್ನ ಹೊರತು ದೇವರೇ ಇಲ್ಲವೆಂಬುದು ನಿಶ್ಚಯ.

**Spiritual Warfare Cards.com**

*Indian Revised Version · CC BY-SA 4.0 · Bridge Connectivity Solutions*

ನೆಹೆಮೀಯನು *1:4-11 (IRV)*

# ಕೃಪಾವಾಗ್ದಾನಗಳನ್ನು ನೆರವೇರಿಸುವವನೇ... ಅವರು ನಿನಗೆ ವಿರುದ್ಧವಾಗಿ ಮಾಡಿದ ಪಾಪಗಳನ್ನು ಅರಿಕೆ ಮಾಡುತ್ತಾ... ನಾವು ನಿನಗೆ ದ್ರೋಹಿಗಳಾಗಿ ನಡೆಯುತ್ತಾ ಬಂದೆವು

ನಾನು ಈ ವರ್ತಮಾನವನ್ನು ಕೇಳಿದ ಕ್ಷಣವೇ ನೆಲದ ಮೇಲೆ ಬಿದ್ದು ಅತ್ತೆನು; ಹಲವು ದಿನಗಳವರೆಗೂ ಶೋಕಿಸುತ್ತಾ ಉಪವಾಸವಾಗಿದ್ದು ಪರಲೋಕದ ದೇವರ ಮುಂದೆ ವಿಜ್ಞಾಪನೆ ಮಾಡುತ್ತಾ ಇದ್ದೆನು. ಆ ವಿಜ್ಞಾಪನೆಗಳಲ್ಲಿ ನಾನು, "ಯೆಹೋವನೇ, ಮಹೋನ್ನತನೂ, ಭಯಭಕ್ತಿಗೂ ಪಾತ್ರನಾಗಿರುವ ಪರಲೋಕದ ದೇವರೇ, ನಿನ್ನನ್ನು ಪ್ರೀತಿಸಿ ನಿನ್ನ ಆಜ್ಞೆಗಳನ್ನು ಅನುಸರಿಸುವವರಿಗೆ ಮಾಡಿದ ಕೃಪಾವಾಗ್ದಾನಗಳನ್ನು ನೆರವೇರಿಸುವವನೇ, ಕೃಪೆಮಾಡಿ ನನ್ನ ಮೊರೆಗೆ ಕಿವಿಗೊಡು, ನನ್ನನ್ನು ಕಟಾಕ್ಷಿಸು, ನಿನ್ನ ಸೇವಕನ ಪ್ರಾರ್ಥನೆಯನ್ನು ಲಾಲಿಸಬೇಕು. ನಾನು ಈಗ ಹಗಲಿರುಳೂ ನಿನ್ನ ಸನ್ನಿಧಿಯಲ್ಲಿ ನಿನ್ನ ಸೇವಕರಾದ ಇಸ್ರಾಯೇಲರಿಗಾಗಿ ಪ್ರಾರ್ಥಿಸುತ್ತಾ ಅವರು ನಿನಗೆ ವಿರುದ್ಧವಾಗಿ ಮಾಡಿದ ಪಾಪಗಳನ್ನು ಅರಿಕೆ ಮಾಡುತ್ತಾ ಇದ್ದೇನೆ; ನಾನೂ, ನನ್ನ ಪೂರ್ವಿಕರೂ ಆ ಪಾಪಗಳಲ್ಲಿ ಪಾಲುಗಾರರಾಗಿದ್ದೇವೆ. ನಾವು ನಿನಗೆ ದ್ರೋಹಿಗಳಾಗಿ ನಡೆಯುತ್ತಾ ಬಂದೆವು; ನೀನು ನಿನ್ನ ಸೇವಕನಾದ ಮೋಶೆಯ ಮುಖಾಂತರ ಕೊಟ್ಟ ಆಜ್ಞಾವಿಧಿನ್ಯಾಯಗಳನ್ನು ನಾವು ಕೈಗೊಳ್ಳಲಿಲ್ಲ. ಆದರೂ, ನಿನ್ನ ಸೇವಕನಾದ ಮೋಶೆಗೆ ಹೇಳಿದ ಮಾತನ್ನು ನೆನಪಿಸಿಕೊಳ್ಳಿರಿ; 'ನೀವು ಅವಿಧೇಯರಾಗಿ ನಡೆಯುವುದಾದರೆ ನಾನು ನಿಮ್ಮನ್ನು ಜನಾಂಗಗಳ ಮಧ್ಯ ಚದುರಿಸಿಬಿಡುವೆನು; ನನಗೆ ಅಭಿಮುಖರಾಗಿ ನನ್ನ ಆಜ್ಞೆಗಳನ್ನು ಅನುಸರಿಸಿ ನಡೆಯುವುದಾದರೆ ನಿಮ್ಮ ಜನರು ಆಕಾಶದ ಕೊನೆಯವರೆಗೆ ಒಯ್ಯಲ್ಪಟ್ಟರೂ ನಾನು ಅವರನ್ನು ಅಲ್ಲಿಂದ ಕೂಡಿಸಿ, ನನ್ನ ನಾಮಸ್ಥಾಪನೆಗೋಸ್ಕರ ಆರಿಸಿದ ಸ್ಥಳಕ್ಕೆ ಮತ್ತೆ ಬರಮಾಡುವೆನು' ಎಂದು ಹೇಳಿರುವೆಯಲ್ಲಾ; ಆ ಮಾತನ್ನು ನೆನಪು ಮಾಡಿಕೊಳ್ಳಿರಿ. "ಅವರು ನಿನ್ನ ಸೇವಕರೂ, ನೀನು ನಿನ್ನ ಮಹಾಶಕ್ತಿ, ಭುಜಪರಾಕ್ರಮಗಳಿಂದ ವಿಮೋಚಿಸಿದ ನಿನ್ನ ಪ್ರಜೆಗಳೂ ಆಗಿರುತ್ತಾರಲ್ಲಾ. ಯೆಹೋವನೇ, ಕೃಪೆಮಾಡು; ನಿನ್ನ ಸೇವಕನಾದ ನನ್ನ ಪ್ರಾರ್ಥನೆಗೂ, ನಿನ್ನ ನಾಮ ಸ್ಮರಣೆಯಲ್ಲಿ ಆನಂದಿಸುವ ನಿನ್ನ ಭಕ್ತರ ಪ್ರಾರ್ಥನೆಗೂ ಕಿವಿಗೊಡು. ನಿನ್ನ ಸೇವಕನು ಈಹೊತ್ತು ಈ ಮನುಷ್ಯನ ದಯೆಗೆ ಪಾತ್ರನಾಗಿ ಸಫಲನಾಗುವಂತೆ ಅನುಗ್ರಹಿಸಬೇಕು" ಎಂದು ಪ್ರಾರ್ಥಿಸಿದೆನು.

**_Spiritual Warfare Cards.com_**

*Indian Revised Version · CC BY-SA 4.0 · Bridge Connectivity Solutions*

ಕೀರ್ತನೆಗಳು *1:1-6 (IRV)*

# ಯೆಹೋವನು ನೀತಿವಂತರ ಮಾರ್ಗವನ್ನು ಲಕ್ಷಿಸುವನು; ದುಷ್ಟರ ಮಾರ್ಗವೋ ನಾಶವಾಗುವುದು

---

ಯಾರು ದುಷ್ಟರ ಆಲೋಚನೆಯಂತೆ ನಡೆಯದೆ,
ಪಾಪಾತ್ಮರ ಮಾರ್ಗದಲ್ಲಿ ನಿಂತುಕೊಳ್ಳದೆ,
ಧರ್ಮನಿಂದಕರೊಡನೆ ಕುಳಿತುಕೊಳ್ಳದೆ, ಯೆಹೋವನ
ಧರ್ಮಶಾಸ್ತ್ರದಲ್ಲಿ ಸಂತೋಷಿಸುತ್ತಾ, ಅದನ್ನೇ
ಹಗಲಿರುಳು ಧ್ಯಾನಿಸುತ್ತಿರುವವನು ಎಷ್ಟೋ ಧನ್ಯನು.
ನೀರಿನ ಕಾಲುವೆಗಳ ಬಳಿಯಲ್ಲಿ ಬೆಳೆದಿರುವ ಮರದ
ಹಾಗೆ ಅವನಿರುವನು. ಅಂಥ ಮರವು ಸೂಕ್ತಕಾಲದಲ್ಲಿ
ಫಲಕೊಡುತ್ತದಲ್ಲಾ. ಅದರ ಎಲೆ ಬಾಡುವುದೇ ಇಲ್ಲ.
ಅದರಂತೆ ಅವನ ಕಾರ್ಯವೆಲ್ಲವೂ ಸಫಲವಾಗುವುದು.
ದುಷ್ಟರೋ ಹಾಗಲ್ಲ; ಅವರು ಗಾಳಿ ಬಡಿದುಕೊಂಡು
ಹೋಗುವ ಹೊಟ್ಟಿನಂತೆ ಇದ್ದಾರೆ. ಆದುದರಿಂದ
ದುಷ್ಟರು ನ್ಯಾಯವಿಚಾರಣೆಯಲ್ಲಿಯೂ, ಪಾಪಾತ್ಮರು
ನೀತಿವಂತರ ಸಭೆಯಲ್ಲಿಯೂ ನಿಲ್ಲುವುದಿಲ್ಲ.
<u>ಯೆಹೋವನು ನೀತಿವಂತರ ಮಾರ್ಗವನ್ನು
ಲಕ್ಷಿಸುವನು; ದುಷ್ಟರ ಮಾರ್ಗವೋ ನಾಶವಾಗುವುದು</u>.

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ಕೀರ್ತನೆಗಳು *4:1-8 (IRV)*

# ಯೆಹೋವನು ತನ್ನ ಭಕ್ತನನ್ನು ತನಗೋಸ್ಕರ ಪ್ರತ್ಯೇಕಿಸಿಕೊಂಡಿದ್ದಾನೆ… ಮಲಗಿಕೊಂಡು ಕೂಡಲೆ ನಿದ್ದೆಮಾಡುವೆನು… ನೀನು ನನ್ನನ್ನು ಸುರಕ್ಷಿತವಾಗಿ ಕಾಪಾಡುತ್ತೀ

---

ನ್ಯಾಯವನ್ನು ಸ್ಥಾಪಿಸುವ ನನ್ನ ದೇವರೇ, ನಿನಗೆ ಮೊರೆಯಿಡುತ್ತೇನೆ; ಸದುತ್ತರವನ್ನು ದಯಪಾಲಿಸು. ನನ್ನನ್ನು ಅಪತ್ತಿನಿಂದ ಬಿಡಿಸಿ, ಸುರಕ್ಷಿತ ಸ್ಥಳದಲ್ಲಿ ಸೇರಿಸಿದಾತನೇ, ನನ್ನನ್ನು ಕರುಣಿಸಿ ನನ್ನ ಪ್ರಾರ್ಥನೆಯನ್ನು ಆಲಿಸು. ಜನರೇ, ನೀವು ಎಷ್ಟರವರೆಗೆ ನನ್ನ ಗೌರವವನ್ನು ಕೆಡಿಸುವಿರಿ, ಎಷ್ಟರವರೆಗೆ ನನ್ನನ್ನು ಅವಮಾನಪಡಿಸುವಿರಿ? ಎಷ್ಟರವರೆಗೆ ವ್ಯರ್ಥವಾದದ್ದನ್ನು ಪ್ರೀತಿಸಿ ಸುಳ್ಳನ್ನು ಹಿಂಬಾಲಿಸುವಿರಿ? ಸೆಲಾ ಯೆಹೋವನು ತನ್ನ ಭಕ್ತನನ್ನು ತನಗೋಸ್ಕರ ಪ್ರತ್ಯೇಕಿಸಿಕೊಂಡಿದ್ದಾನೆ ಎಂದು ತಿಳಿದುಕೊಳ್ಳಿರಿ. ನಾನು ಆತನಿಗೆ ಮೊರೆಯಿಡುವಾಗೆಲ್ಲಾ ಆತನು ಕೇಳುತ್ತಾನೆ. ಭಯಪಡಿರಿ, ಪಾಪಮಾಡಬೇಡಿರಿ; ಹಾಸಿಗೆಯ ಮೇಲೆ ಇರುವಾಗ ಹೃದಯದಲ್ಲೇ ಆಲೋಚಿಸಿಕೊಳ್ಳಿರಿ ಮತ್ತು ಮೌನವಾಗಿರಿ. ಸೆಲಾ ನ್ಯಾಯವಾದ ಯಜ್ಞಗಳನ್ನು ಸಮರ್ಪಿಸಿರಿ; ಯೆಹೋವನಲ್ಲಿಯೇ ಭರವಸವಿಡಿರಿ. “ನಮಗೆ ಒಳ್ಳೆಯದನ್ನು ಮಾಡುವವರು ಯಾರಿದ್ದಾರೆ?” ಎಂದು ಅನೇಕರು ಹೇಳಿಕೊಳ್ಳುತ್ತಾರೆ. ಯೆಹೋವನೇ, ನೀನು ಪ್ರಸನ್ನಮುಖದಿಂದ ನಮ್ಮನ್ನು ನೋಡಬೇಕು. ಧಾನ್ಯದ್ರಾಕ್ಷಿಗಳು ಸಮೃದ್ಧಿಯಾಗಿ ಬೆಳೆದ ಸುಗ್ಗಿ ಕಾಲದಲ್ಲಿ ಜನರಿಗಾಗುವ ಸಂತೋಷಕ್ಕಿಂತಲೂ ನೀನು ನನ್ನ ಹೃದಯದಲ್ಲಿ ಹೆಚ್ಚಾದ ಆನಂದವನ್ನು ಉಂಟುಮಾಡಿದ್ದೀ. ನಾನು ನಿರ್ಭಯವಾಗಿರುವುದರಿಂದ ಮಲಗಿಕೊಂಡು ಕೂಡಲೆ ನಿದ್ದೆಮಾಡುವೆನು. ಏಕೆಂದರೆ ಯೆಹೋವನೇ, ನನಗೆ ಯಾವ ಅಪಾಯವೂ ಬಾರದಂತೆ ನೀನು ನನ್ನನ್ನು ಸುರಕ್ಷಿತವಾಗಿ ಕಾಪಾಡುತ್ತೀ.

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ಕೀರ್ತನೆಗಳು 15:1-5 (IRV)

# ಅವನು ಸಜ್ಜನನೂ, ನೀತಿವಂತನೂ... ಮನಃಪೂರ್ವಕವಾಗಿ ಸತ್ಯದ ಮಾತುಗಳನ್ನಾಡುವವನೂ... ಇಂಥವನು ಎಂದಿಗೂ ಕದಲುವುದಿಲ್ಲ

ಯೆಹೋವನೇ, ನಿನ್ನ ಗುಡಾರದಲ್ಲಿ ಇಳಿದುಕೊಂಡಿರುವುದಕ್ಕೆ ಯಾರು ಯೋಗ್ಯರು? ನಿನ್ನ ಪರಿಶುದ್ಧಪರ್ವತದಲ್ಲಿ ವಾಸಿಸತಕ್ಕವನು ಎಂಥವನಾಗಿರಬೇಕು? ಅವನು ಸಜ್ಜನನೂ, ನೀತಿವಂತನೂ, ಮನಃಪೂರ್ವಕವಾಗಿ ಸತ್ಯದ ಮಾತುಗಳನ್ನಾಡುವವನೂ ಆಗಿರಬೇಕು. ಅವನು ಚಾಡಿಯನ್ನು ಹೇಳದವನೂ, ಮತ್ತೊಬ್ಬರಿಗೆ ಅನ್ಯಾಯ ಮಾಡದವನೂ, ಯಾರನ್ನೂ ನಿಂದಿಸದವನೂ ಆಗಿರಬೇಕು. ಅವನು ಭ್ರಷ್ಟರನ್ನು ಬಿಟ್ಟುಬಿಟ್ಟವನೂ, ಯೆಹೋವನಲ್ಲಿ ಭಯಭಕ್ತಿಯುಳ್ಳವರನ್ನು ಸನ್ಮಾನಿಸುವವನೂ, ನಷ್ಟವಾದರೂ ಪ್ರಮಾಣತಪ್ಪದವನೂ ಆಗಿರಬೇಕು. ಅವನು ಸಾಲಕ್ಕೆ ಬಡ್ಡಿ ಕೇಳದವನೂ, ನಿರಪರಾಧಿಯ ಕೇಡಿಗಾಗಿ ಲಂಚವನ್ನು ತೆಗೆದುಕೊಳ್ಳದವನೂ ಆಗಿರಬೇಕು. ಇಂಥವನು ಎಂದಿಗೂ ಕದಲುವುದಿಲ್ಲ.

**_Spiritual Warfare Cards.com_**

*Indian Revised Version · CC BY-SA 4.0 · Bridge Connectivity Solutions*

ಕೀರ್ತನೆಗಳು *13:1-3, 5-6 (IRV)*

# ನಾನಂತೂ ನಿನ್ನ ಕೃಪೆಯಲ್ಲಿ ಭರವಸವಿಟ್ಟಿದ್ದೇನೆ... ಯೆಹೋವನ ಮಹೋಪಕಾರಕ್ಕಾಗಿ ಆತನಿಗೆ ಹಾಡುವೆನು

---

**ಯೆಹೋವನೇ, ನೀನು ಇನ್ನೆಷ್ಟರವರೆಗೆ ನನ್ನನ್ನು ಸಂಪೂರ್ಣವಾಗಿ ಮರೆತಿರುವಿ? ಇನ್ನೆಲ್ಲಿಯ ತನಕ ನನಗೆ ವಿಮುಖನಾಗಿರುವಿ? ನಾನು ಇನ್ನೆಷ್ಟರವರೆಗೆ ಹಗಲೆಲ್ಲಾ ದುಃಖಾಕ್ರಾಂತನಾಗಿದ್ದು, ಆಲೋಚಿಸಿಕೊಳ್ಳುತ್ತಾ ಇರಬೇಕು? ಇನ್ನೆಲ್ಲಿಯ ತನಕ ವಿರೋಧಿಯು ನನಗೆ ದೊರೆಯಾಗಿರಬೇಕು? ಯೆಹೋವನೇ, ನನ್ನ ದೇವರೇ, ನನ್ನಲ್ಲಿ ದೃಷ್ಟಿಯಿಟ್ಟು ನನಗೆ ಸದುತ್ತರವನ್ನು ದಯಪಾಲಿಸು; ನನಗೆ ಮರಣನಿದ್ರೆಯು ಉಂಟಾಗದಂತೆ ನನ್ನ ಕಣ್ಣುಗಳನ್ನು ಕಳೆಗೊಳಿಸು. … ನಾನಂತೂ ನಿನ್ನ ಕೃಪೆಯಲ್ಲಿ ಭರವಸವಿಟ್ಟಿದ್ದೇನೆ; ನೀನು ನನ್ನನ್ನು ರಕ್ಷಿಸಿದ್ದರಿಂದ ನನ್ನ ಹೃದಯವು ಹರ್ಷಗೊಳ್ಳುವುದು. ಯೆಹೋವನ ಮಹೋಪಕಾರಕ್ಕಾಗಿ ಆತನಿಗೆ ಹಾಡುವೆನು.**

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ಕೀರ್ತನೆಗಳು *16:1-5, 7-11 (IRV)*

# ನನ್ನ ಪಾಲೂ, ನನ್ನ ಪಾನವೂ ಯೆಹೋವನೇ… ನೀನು ನನಗೆ ಜೀವಮಾರ್ಗವನ್ನು ತಿಳಿಯಪಡಿಸುವಿ

ದೇವರೇ, ನಾನು ನಿನ್ನ ಶರಣಾಗತನು; ನನ್ನನ್ನು ಕಾಪಾಡು. ನಾನು ಯೆಹೋವನನ್ನು ಕುರಿತು, “ನೀನೇ ನನ್ನ ಒಡೆಯನು; ನನ್ನ ಸುಖವು ನಿನ್ನಲ್ಲಿಯೇ ಹೊರತು ಬೇರೆ ಇಲ್ಲ” ಎಂದು ಹೇಳುವೆನು. ಭೂಲೋಕದಲ್ಲಿರುವ ದೇವಜನರ ವಿಷಯದಲ್ಲಿ, “ಇವರೇ ಶ್ರೇಷ್ಠರು, ಇವರೇ ನನಗೆ ಇಷ್ಟರಾದವರು” ಎಂದು ಹೇಳುವೆನು. ಇತರ ದೇವರುಗಳನ್ನು ಅವಲಂಬಿಸಿದವರಿಗೆ ಬಹಳ ಕಷ್ಟನಷ್ಟಗಳು ಉಂಟಾಗುವವು. ಅವರಂತೆ ನಾನು ರಕ್ತವನ್ನು ಪಾನದ್ರವ್ಯವಾಗಿ ಸಮರ್ಪಿಸುವುದೇ ಇಲ್ಲ; ಅವರ ನಾಮಗಳನ್ನಾದರೂ ಉಚ್ಚರಿಸುವುದಿಲ್ಲ. <u>ನನ್ನ ಪಾಲೂ, ನನ್ನ ಪಾನವೂ ಯೆಹೋವನೇ</u>, ನೀನೇ ನನ್ನ ಸ್ವತ್ತನ್ನು ಭದ್ರಗೊಳಿಸುತ್ತೀ. … ಯೆಹೋವನು ನನಗೆ ಆಲೋಚನೆಯನ್ನು ಹೇಳಿಕೊಡುತ್ತಾನೆ; ನಾನು ಆತನನ್ನು ಕೊಂಡಾಡುವೆನು. ರಾತ್ರಿಯ ಸಮಯಗಳಲ್ಲಿ ನನ್ನ ಅಂತರಾತ್ಮವು ನನ್ನನ್ನು ಬೋಧಿಸುತ್ತದೆ. ನಾನು ಯೆಹೋವನನ್ನು ಯಾವಾಗಲೂ ನನ್ನೆದುರಿನಲ್ಲಿಯೇ ಇಟ್ಟುಕೊಂಡಿದ್ದೇನೆ; ಆತನು ನನ್ನ ಬಲಗಡೆಯಲ್ಲಿ ಇರುವುದರಿಂದ ನಾನು ಎಂದಿಗೂ ಕದಲುವುದಿಲ್ಲ. ಆದಕಾರಣ ನನ್ನ ಹೃದಯವು ಹರ್ಷಿಸುತ್ತದೆ; ನನ್ನ ಮನವು ಉಲ್ಲಾಸಗೊಳ್ಳುತ್ತದೆ; ನನ್ನ ಶರೀರವೂ ಸುರಕ್ಷಿತವಾಗಿರುವುದು. ಏಕೆಂದರೆ ನೀನು ನನ್ನ ಜೀವಾತ್ಮವನ್ನು ಪಾತಾಳದಲ್ಲಿ ಬಿಡುವುದಿಲ್ಲ; ನಿನ್ನ ಭಕ್ತನಿಗೆ ಅಧೋಲೋಕವನ್ನು ನೋಡಗೊಡಿಸುವುದಿಲ್ಲ. <u>ನೀನು ನನಗೆ ಜೀವಮಾರ್ಗವನ್ನು ತಿಳಿಯಪಡಿಸುವಿ</u>; ನಿನ್ನ ಸಮ್ಮುಖದಲ್ಲಿ ಪರಿಪೂರ್ಣ ಸಂತೋಷವಿದೆ; ನಿನ್ನ ಬಲಗೈಯಲ್ಲಿ ಶಾಶ್ವತ ಭಾಗ್ಯವಿದೆ.

**_Spiritual Warfare Cards.com_**

*Indian Revised Version · CC BY-SA 4.0 · Bridge Connectivity Solutions*

ಕೀರ್ತನೆಗಳು *23:1-6 (IRV)*

# ಯೆಹೋವನು ನನಗೆ ಕುರುಬನು; ಕೊರತೆಪಡೆನು... ನನ್ನ ಪ್ರಾಣವನ್ನು ಉಜ್ಜೀವಿಸಮಾಡಿ... ನೀನು ಹತ್ತಿರವಿರುವುದರಿಂದ

ಯೆಹೋವನು ನನಗೆ ಕುರುಬನು; ಕೊರತೆಪಡೆನು. ಆತನು ಹಸಿರುಗಾವಲುಗಳಲ್ಲಿ ನನ್ನನ್ನು ತಂಗಿಸುತ್ತಾನೆ; ವಿಶ್ರಾಂತಿಕರವಾದ ನೀರುಗಳ ಬಳಿಗೆ ಬರಮಾಡುತ್ತಾನೆ. ನನ್ನ ಪ್ರಾಣವನ್ನು ಉಜ್ಜೀವಿಸಮಾಡಿ ತನ್ನ ಹೆಸರಿಗೆ ತಕ್ಕಂತೆ ನೀತಿಯ ಮಾರ್ಗದಲ್ಲಿ ನನ್ನನ್ನು ನಡೆಸುತ್ತಾನೆ. ನಾನು ಕಾರ್ಗತ್ತಲಿನ ಕಣಿವೆಯಲ್ಲಿ ನಡೆಯುವಾಗಲೂ, ನೀನು ಹತ್ತಿರವಿರುವುದರಿಂದ ಕೇಡಿಗೆ ಹೆದರೆನು; ನಿನ್ನ ದೊಣ್ಣೆಯೂ ಮತ್ತು ನಿನ್ನ ಕೋಲೂ ನನಗೆ ಧೈರ್ಯ ಕೊಡುತ್ತವೆ. ವೈರಿಗಳ ಮುಂದೆಯೇ ನೀನು ನನಗೋಸ್ಕರ ಔತಣವನ್ನು ಸಿದ್ಧಪಡಿಸುತ್ತೀ; ನನ್ನ ತಲೆಗೆ ತೈಲವನ್ನು ಹಚ್ಚಿಸುತ್ತೀ, ನನ್ನ ಪಾತ್ರೆಯು ತುಂಬಿ ಹೊರಸೂಸುತ್ತದೆ. ನಿಶ್ಚಯವಾಗಿ ನನ್ನ ಜೀವಮಾನದಲ್ಲೆಲ್ಲಾ ಶುಭವೂ ಮತ್ತು ಕೃಪೆಯೂ ನನ್ನನ್ನು ಹಿಂಬಾಲಿಸುವವು. ನಾನು ಸದಾಕಾಲವೂ ಯೆಹೋವನ ಮಂದಿರದಲ್ಲಿ ವಾಸಿಸುವೆನು.



*Indian Revised Version · CC BY-SA 4.0 · Bridge Connectivity Solutions*

ಜ್ಞಾನೋಕ್ತಿಗಳು *1:7; 9:18; 4:23-26 (IRV)*

# ನಿನ್ನ ಹೃದಯವನ್ನು ಬಹು ಜಾಗರೂಕತೆಯಿಂದ ಕಾಪಾಡಿಕೋ, ಅದರೊಳಗಿಂದ ಜೀವಬುಗ್ಗೆಗಳು ಹೊರಡುವವು

ಯೆಹೋವನ ಭಯವೇ ತಿಳಿವಳಿಕೆಗೆ ಮೂಲವು, ಮೂರ್ಖರಾದರೋ ಜ್ಞಾನವನ್ನು ಮತ್ತು ಶಿಕ್ಷಣವನ್ನು ತಿರಸ್ಕರಿಸುವರು. ... ಆ ಮನೆಯು ಪ್ರೇತ ನಿವಾಸವೆಂದೂ ಅವಳ ಅತಿಥಿಗಳು ಅಗಾಧಪಾತಾಳದಲ್ಲಿ ಬಿದ್ದಿರುವರೆಂದೂ ಅವನಿಗೆ ತಿಳಿಯದು. ... ನಿನ್ನ ಹೃದಯವನ್ನು ಬಹು ಜಾಗರೂಕತೆಯಿಂದ ಕಾಪಾಡಿಕೋ, ಅದರೊಳಗಿಂದ ಜೀವಬುಗ್ಗೆಗಳು ಹೊರಡುವವು. ಸೊಟ್ಟಮಾತುಗಳನ್ನು ನಿನ್ನಿಂದ ತೊಲಗಿಸಿಬಿಡು, ಕೆಟ್ಟ ನುಡಿಗಳನ್ನು ಬಾಯಿಂದ ದೂರಮಾಡು. ನೆಟ್ಟಗೆ ದೃಷ್ಟಿಸು, ನಿನ್ನ ಕಣ್ಣುಗಳು ನಿನ್ನ ಮುಂದೆಯೇ ಇರಲಿ. ನೀನು ನಡೆಯುವ ದಾರಿಯನ್ನು ಸಮಮಾಡು, ಆಗ ನಿನ್ನ ಮಾರ್ಗಗಳೆಲ್ಲಾ ದೃಢವಾಗಿರುವವು.



*Indian Revised Version · CC BY-SA 4.0 · Bridge Connectivity Solutions*

ಯೆರೆಮೀಯನು *17:5, 7-10 (IRV)*

# ಹೃದಯವು ಎಲ್ಲಾದಕ್ಕಿಂತಲೂ ವಂಚಕ… ಹೃದಯವನ್ನು ಪರೀಕ್ಷಿಸುವವನೂ, ಅಂತರಿಂದ್ರಿಯವನ್ನು ಶೋಧಿಸುವವನೂ ಆಗಿದ್ದೇನೆ

ಯೆಹೋವನು ಹೀಗೆನ್ನುತ್ತಾನೆ, “ಮಾನವ ಮಾತ್ರದವರಲ್ಲಿ ಭರವಸವಿಟ್ಟು, ನರಜನ್ಮದವರನ್ನು ತನ್ನ ಭುಜಬಲವೆಂದು ತಿಳಿದು, ಯೆಹೋವನನ್ನು ತೊರೆಯುವ ಮನಸ್ಸುಳ್ಳವನು ಶಾಪಗ್ರಸ್ಥನು. … ಯಾರು ಯೆಹೋವನಲ್ಲಿ ನಂಬಿಕೆಯಿಟ್ಟಿದ್ದಾರೋ, ಯಾರಿಗೆ ಯೆಹೋವನು ಭರವಸೆಯಾಗಿದ್ದಾನೋ ಅವರೇ ಧನ್ಯರು. ನೀರಾವರಿಯಲ್ಲಿ ನೆಡಲ್ಪಟ್ಟು ಹೊಳೆಯ ದಡದಲ್ಲಿ ತನ್ನ ಬೇರುಗಳನ್ನು ಹರಡಿ, ಧಗೆಗೆ ಭಯಪಡದೆ, ಹಸುರೆಲೆಯನ್ನು ಚಿಗುರಿಸುತ್ತಾ, ಕ್ಷಾಮದ ವರ್ಷದಲ್ಲಿಯೂ ನಿಶ್ಚಿಂತೆಯಾಗಿ ಸದಾ ಫಲಕೊಡುತ್ತಾ ಇರುವ ಮರಕ್ಕೆ ಅವರು ಸಮಾನವಾಗಿರುವರು.” ಹೃದಯವು ಎಲ್ಲಾದಕ್ಕಿಂತಲೂ ವಂಚಕ; ಗುಣವಾಗದ ರೋಗಕ್ಕೆ ಒಳಗಾಗಿದೆ; ಅದನ್ನು ತಿಳಿದವರು ಯಾರು? ಯೆಹೋವನಾದ ನಾನು ಪ್ರತಿಯೊಬ್ಬನಿಗೂ ಕರ್ಮಫಲವನ್ನು ಅವನವನ ನಡತೆಗೆ ತಕ್ಕ ಹಾಗೆ ಕೊಡಬೇಕೆಂದು, ಹೃದಯವನ್ನು ಪರೀಕ್ಷಿಸುವವನೂ, ಅಂತರಿಂದ್ರಿಯವನ್ನು ಶೋಧಿಸುವವನೂ ಆಗಿದ್ದೇನೆ.

**Spiritual Warfare Cards.com**

*Indian Revised Version · CC BY-SA 4.0 · Bridge Connectivity Solutions*

ಯೋವೇಲನು *2:11-14 (IRV)*

# ನೀವು ಪೂರ್ಣಹೃದಯದಿಂದ ನನ್ನ ಕಡೆಗೆ ತಿರುಗಿಕೊಳ್ಳಿರಿ. ಉಪವಾಸಮಾಡಿರಿ, ಅಳಿರಿ, ಗೋಳಾಡಿರಿ… ಆತನು ದಯೆಯೂ, ಕನಿಕರವೂ, ದೀರ್ಘಶಾಂತಿಯೂ

---

**ಯೆಹೋವನ ದಿನವು ಮಹತ್ತರವೂ ಮತ್ತು ಅತಿಭಯಂಕರವೂ ಆಗಿದೆ. ಅದನ್ನು ಸಹಿಸಿಕೊಳ್ಳುವವರು ಯಾರು? ಯೆಹೋವನು ಹೀಗೆ ಹೇಳುತ್ತಾನೆ, "ಈಗಲಾದರೂ, ನೀವು ಪೂರ್ಣಹೃದಯದಿಂದ ನನ್ನ ಕಡೆಗೆ ತಿರುಗಿಕೊಳ್ಳಿರಿ. ಉಪವಾಸಮಾಡಿರಿ, ಅಳಿರಿ, ಗೋಳಾಡಿರಿ." ನಿಮ್ಮ ಉಡುಪುಗಳನ್ನಲ್ಲ, ನಿಮ್ಮ ಹೃದಯಗಳನ್ನು ಹರಿದುಕೊಳ್ಳಿರಿ. ನಿಮ್ಮ ದೇವರಾದ ಯೆಹೋವನ ಕಡೆಗೆ ತಿರುಗಿಕೊಳ್ಳಿರಿ. ಆತನು ದಯೆಯೂ, ಕನಿಕರವೂ, ದೀರ್ಘಶಾಂತಿಯೂ, ಮಹಾಪ್ರೀತಿಯೂ ಉಳ್ಳವನಾಗಿ ತಾನು ವಿಧಿಸುವ ಕೇಡಿಗೆ ಮನಮರುಗುವಂಥವನು. ಆತನು ಒಂದು ವೇಳೆ ಮನಸ್ಸನ್ನು ಬದಲಾಯಿಸಿ, ನಿಮ್ಮ ಕಡೆಗೆ ತಿರುಗಿಕೊಂಡು ನಿಮ್ಮನ್ನು ಆಶೀರ್ವದಿಸಬಹುದು; ನಿಮ್ಮ ದೇವರಾದ ಯೆಹೋವನಿಗೆ ನೀವು ಅರ್ಪಿಸುವ ನೈವೇದ್ಯವನ್ನು ಸ್ವೀಕರಿಸಿ ಸುವರಗಳನ್ನು ದಯಪಾಲಿಸಬಹುದು.**

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ಓಬದ್ಯನು 1:3-4, 15, 17 (IRV)

# ನಿಮ್ಮ ಹೃದಯದ ಒಣ ಹೆಮ್ಮೆಯು ನಿಮ್ಮನ್ನು ಮೋಸಗೊಳಿಸಿದೆ… ನೀನು ಮಾಡಿದ್ದೇ ನಿನಗಾಗುವುದು

ಉನ್ನತ ಸ್ಥಾನದಲ್ಲಿ ಬಂಡೆಯ ಬಿರುಕುಗಳೊಳಗೆ ವಾಸಿಸುತ್ತಾ, ನನ್ನನ್ನು ನೆಲಕ್ಕೆ ಇಳಿಸಬಲ್ಲವರು ಯಾರು? ಎಂದುಕೊಳ್ಳುವ ಜನರೇ, **ನಿಮ್ಮ ಹೃದಯದ ಒಣ ಹೆಮ್ಮೆಯು ನಿಮ್ಮನ್ನು ಮೋಸಗೊಳಿಸಿದೆ**. ನೀನು ಹದ್ದಿನಂತೆ ಮೇಲಕ್ಕೆ ಏರಿದರೂ, ನಿನ್ನ ಗೂಡು ನಕ್ಷತ್ರ ಮಂಡಲದಲ್ಲಿ ನೆಲೆಗೊಂಡಿದ್ದರೂ, ಅಲ್ಲಿಂದ ನಿನ್ನನ್ನು ಇಳಿಸಿಬಿಡುವೆನು. ಇದು ಯೆಹೋವನ ನುಡಿ. … ಯೆಹೋವನ ದಿನವು ಸಮಸ್ತ ಜನಾಂಗಗಳಿಗೆ ಸಮೀಪಿಸಿದೆ. ಎದೋಮೇ, **ನೀನು ಮಾಡಿದ್ದೇ ನಿನಗಾಗುವುದು**. ನಿನ್ನ ಕೃತ್ಯವೇ ನಿನ್ನ ತಲೆಗೆ ಬರುವುದು. … ಆದರೆ ಚೀಯೋನ್ ಪರ್ವತದಲ್ಲಿ ಅನೇಕರು ಉಳಿದಿರುವರು, ಆ ಪರ್ವತವು ಪರಿಶುದ್ಧವಾಗಿರುವುದು; ಯಾಕೋಬನ ವಂಶದವರು ತಮ್ಮ ಸ್ವತ್ತುಗಳನ್ನು ಅನುಭವಿಸುವರು.

*Spiritual Warfare Cards.com*

*Indian Revised Version · CC BY-SA 4.0 · Bridge Connectivity Solutions*

ನಹೂಮನು *1:2-3, 5, 7 (IRV)*

# ಯೆಹೋವನು ಒಳ್ಳೆಯವನು; ಇಕ್ಕಟ್ಟಿನ ದಿನದಲ್ಲಿ ಆಶ್ರಯದುರ್ಗವಾಗಿದ್ದಾನೆ... ತನ್ನ ಮೊರೆಹೊಕ್ಕವರನ್ನು ಬಲ್ಲನು

---

ಯೆಹೋವನು ಸ್ವಗೌರವವನ್ನು ಕಾಪಾಡಿಕೊಳ್ಳುವ ದೇವರು. ಆತನು ಮುಯ್ಯಿತೀರಿಸುವವನು; ಹೌದು ಯೆಹೋವನು ಮುಯ್ಯಿತೀರಿಸುವವನು, ಕೋಪಭರಿತನು; ಯೆಹೋವನು ತನ್ನ ವಿರೋಧಿಗಳಿಗೆ ಮುಯ್ಯಿತೀರಿಸುತ್ತಾನೆ. ತನ್ನ ಶತ್ರುಗಳ ಮೇಲೆ ದೀರ್ಘರೋಷವಿಡುತ್ತಾನೆ. ಯೆಹೋವನು ದೀರ್ಘಶಾಂತನಾಗಿದ್ದರೂ ಆತನ ಶಕ್ತಿಯು ಅಪಾರ, ಅಪರಾಧಿಗಳನ್ನು ಶಿಕ್ಷಿಸದೆ ಬಿಡನು; ಯೆಹೋವನು ಬಿರುಗಾಳಿಯಲ್ಲಿಯೂ, ತುಫಾನಿನಲ್ಲಿಯೂ ನಡೆಯುತ್ತಾನೆ; ಮೋಡಗಳು ಆತನ ಹೆಜ್ಜೆಯಿಂದೇಳುವ ಧೂಳು. … ಆತನ ಮುಂದೆ ಬೆಟ್ಟಗಳು ಅದರುತ್ತವೆ, ಗುಡ್ಡಗಳು ಕರಗುತ್ತವೆ; ಆತನ ದರ್ಶನಕ್ಕೆ ಭೂಮಿಯು ಕಂಪಿಸುತ್ತದೆ, ಹೌದು, ಲೋಕವೂ ಲೋಕನಿವಾಸಿಗಳೆಲ್ಲರೂ ತಲ್ಲಣಿಸುತ್ತವೆ. … ಯೆಹೋವನು ಒಳ್ಳೆಯವನು; ಇಕ್ಕಟ್ಟಿನ ದಿನದಲ್ಲಿ ಆಶ್ರಯದುರ್ಗವಾಗಿದ್ದಾನೆ; ತನ್ನ ಮೊರೆಹೊಕ್ಕವರನ್ನು ಬಲ್ಲನು.

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*

ಮೀಕನು *6:6, 8*; ಹಬಕ್ಕೂಕನು *2:4-5 (IRV)*

# ನಿನ್ನ ದೇವರಿಗೆ ನಮ್ರವಾಗಿ ನಡೆದುಕೊಳ್ಳುವುದು... ನೀತಿವಂತನು ತನ್ನ ನಂಬಿಕೆಯಿಂದಲೇ ಬದುಕುವನು

---

ನಾನು ಯೆಹೋವನ ಸನ್ನಿಧಿಯಲ್ಲಿ ಯಾವ ಕಾಣಿಕೆಯೊಡನೆ ಕಾಣಿಸಿಕೊಳ್ಳಲಿ? ಯಾವುದನ್ನರ್ಪಿಸಿ ಮಹೋನ್ನತ ದೇವರ ಸಮ್ಮುಖದಲ್ಲಿ ಅಡ್ಡಬೀಳಲಿ? ಹೋಮದ ಪಶುಗಳನ್ನು ಅಥವಾ ಒಂದು ವರ್ಷದ ಕರುಗಳನ್ನು ತೆಗೆದುಕೊಂಡು ಬಂದು ಆತನ ಮುಂದೆ ಕಾಣಿಸಿಕೊಳ್ಳಲೋ? ... ಮನುಷ್ಯನೇ, ಒಳ್ಳೆಯದು ಇಂಥದ್ದೇ ಎಂದು ಯೆಹೋವನು ನಿನಗೆ ತೋರಿಸಿದ್ದಾನಲ್ಲವೇ. ನ್ಯಾಯವನ್ನು ಆಚರಿಸುವುದು, ಕರುಣೆಯಲ್ಲಿ ಆಸಕ್ತನಾಗಿರುವುದು, ನಿನ್ನ ದೇವರಿಗೆ ನಮ್ರವಾಗಿ ನಡೆದುಕೊಳ್ಳುವುದು ಇಷ್ಟನ್ನೇ ಹೊರತು ಯೆಹೋವನು ನಿನ್ನಿಂದ ಇನ್ನೇನು ಅಪೇಕ್ಷಿಸುವನು? ... ಇಗೋ, ದುಷ್ಟನ ಅಂತರಾತ್ಮವು ತನ್ನ ಕ್ರಿಯೆಗಳಿಂದ ಉಬ್ಬಿಹೋಗಿದೆ, ಆದರೆ, ನೀತಿವಂತನು ತನ್ನ ನಂಬಿಕೆಯಿಂದಲೇ ಬದುಕುವನು. ಅಲ್ಲದೆ ಮದ್ಯಪಾನವು ಮೋಸಕರವಾದ ಕಾರಣ ದುಷ್ಟನನ್ನು ಮದವೇರಿಸುವುದು, ಸ್ವಸ್ಥಳದಲ್ಲಿ ನಿಲ್ಲಲು ಬಿಡುವುದಿಲ್ಲ; ಪಾತಾಳದಷ್ಟು ಅತಿ ಆಶೆಗೆ ಪ್ರೇರೇಪಿಸಿ ಮೃತ್ಯುವಿನಂತೆ ಅತೃಪ್ತನಾಗಿ ಜೀವಿಸುವನು. ಯೆಹೋವನ ಒಡಂಬಡಿಕೆಯ ವಿರುದ್ಧ ಜೀವಿಸುವವರನ್ನು ತನ್ನ ಕಡೆಗೆ ಆಕರ್ಷಿಸುವನು.

***Spiritual Warfare Cards.com***

*Indian Revised Version · CC BY-SA 4.0 · Bridge Connectivity Solutions*